ವಿಶ್ವವಾಣಿ
ವಿಶ್ವಾಸವೇ ವಿಶ್ವ

ರಾಜ್ಯಕ್ಕೆ ಕರುಣ್ ಸವಾಲು

7 ಇನ್ನಿಂಗ್ಸ್, 5 ಶತಕ, 752 ರನ್

ಸೆಮಿಫೈನಲ್ ಪಂದ್ಯದಲ್ಲೂ 88 ರನ್ ಗಳಿಸಿದ ರಾಜ್ಯದ ಮಾಜಿ ಆಟಗಾರ ಕರುಣ್ ನಾಯರ್ ಹಜಾರೆ ಟ್ರೋಫಿ ಫೈನಲ್‌ನಲ್ಲಿ ಕರ್ನಾಟಕ ವಿರುದ್ಧ ವಿದರ್ಭ ತಂಡವನ್ನು ಮುನ್ನಡೆಸಲಿದ್ದಾರೆ. ಈ ಮೂಲಕ ತಮ್ಮನ್ನು ರಣಜಿಯಿಂದ ಕೈಬಿಟ್ಟ ರಾಜ್ಯ ತಂಡಕ್ಕೆ ತಿರುಗೇಟು ನೀಡಲು ಸಜ್ಜಾಗಿದ್ದಾರೆ.

ಪುಟ ತೆರೆದಂತೆ...

ನಮ್ಮಷ್ಟಕ್ಕೆ ನಾವೇ ಮಾತನಾಡಿಕೊಳ್ಳುವುದು ಹುಚ್ಚೇ?
ಶಿಶಿರ ಕಾಲ
ಶಿಶಿರ್ ಹೆಗಡೆ
ಸಂ.ಪುಟ | 6

ಹವ್ಯಕ ಸಂಸ್ಕೃತಿಯ ಒಳನೋಟಗಳು
ಹವ್ಯಕುಟುಂಬಿ
ಡಾ.ಆರ್.ಜಿ.ಹೆಗಡೆ
ಸಂ.ಗಮ | 7

ಮಾತಂದ್ರೆ ಮಾತು

ಕೃಷಿ ಕ್ಷೇತ್ರಕ್ಕೆ ನೀಡುವ ಯಾವುದೇ ಸಬ್ಸಿಡಿ ನೇರವಾಗಿ ರೈತರಿಗೆ ತಲುಪಬೇಕು. ರೈತರ ಸಂಕಷ್ಟ ತುರ್ತು ರಾಷ್ಟ್ರೀಯ ಗಮನ ಸೆಳೆಯುತ್ತದೆ. ರೈತರ ಕಾಳಜಿಯನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ. ರೈತರಿಗೆ ಆರ್ಥಿಕ ಭದ್ರತೆ ಬೇಕು. ಕಾಲಮಿತಿಯಲ್ಲಿ ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು ಅಗತ್ಯವಾಗಿದೆ. ಸಕಾರಾತ್ಮಕ ಮನಸ್ಸಿನೊಂದಿಗೆ ಪರಿಹಾರ ಕಂಡುಕೊಳ್ಳಲು ಪ್ರತಿಯೊಬ್ಬರು ಒಗ್ಗಟ್ಟಿನಿಂದ ಶ್ರಮಿಸಬೇಕಾಗಿದೆ.

ಜಗದೀಪ್ ಧನ್‌ಕರ್
ಉಪರಾಷ್ಟ್ರಪತಿ

ದಾರಿದೀಪೋಕ್ತಿ

ಪರಿಸ್ಥಿತಿ ನಿಮ್ಮ ಪರವಾಗಿ ಇಲ್ಲದ ಸಮಯದಲ್ಲೂ ಮನಸ್ಸಿನ ಶಾಂತಿ ಮತ್ತು ಸಹನೆಯನ್ನು ಕಳೆದುಕೊಳ್ಳದೇ ಸಮಚಿತ್ತದಿಂದ ವರ್ತಿಸುವುದು ಅತ್ಯಂತ ಬಲಿಷ್ಠ ವ್ಯಕ್ತಿಯ ದೊಡ್ಡ ಸಾಮರ್ಥ್ಯ. ಈ ಗುಣವನ್ನು ಬೆಳೆಸಿಕೊಂಡರೆ, ಎಂಥ ಸನ್ನಿವೇಶವನ್ನಾದರೂ ಎದುರಿಸಬಹುದು.

ವಕ್ರತುಂಡೋಕ್ತಿ

ಯಾವುದೇ ಕೆಲಸವನ್ನಾದರೂ ಕೊನೇಕ್ಷಣದಲ್ಲಿ ಮಾಡುವ ಒಂದು ಪ್ರಯೋಜನವೆಂದರೆ ಅದನ್ನು ಅತ್ಯಂತ ಶೀಘ್ರವಾಗಿ ಮಾಡಿ ಮುಗಿಸಬಹುದು.

ಹೈಕಮಾಂಡ್ ವಿರುದ್ಧವೇ ಸಡ್ಡು ಹೊಡೆದ ರಾಜಣ್ಣ, ಜಾರಕಿಹೊಳಿ
ಕೆಪಿಸಿಸಿ ಅಧ್ಯಕ್ಷತೆ ಬೇಕಿದ್ದರೆ ಹೈಕಮಾಂಡ್‌ಗೆ ದೂರು ನೀಡಲಿ: ಡಿಕೆಶಿ

ಕೈ ಕದನಕ್ಕಿಲ್ಲ ವಿರಾಮ

ಬೆಂಗಳೂರು: ರಾಜ್ಯ ಕಾಂಗ್ರೆಸ್‌ನಲ್ಲಿ ಭುಗಿಲೆದ್ದಿರುವ ಬಂಡಾಯಕ್ಕೆ ಕೊನೆಯಿಲ್ಲವಾಗಿದೆ. ಅಧಿಕಾರ ಹಸ್ತಾಂತರ, ಅಧ್ಯಕ್ಷರ ಬದಲಾವಣೆಗೆ ಸಂಬಂಧಿಸಿದಂತೆ ಯಾರೂ ಮಾತನಾಡದಂತೆ ಸರಣಿ ಎಚ್ಚರಿಕೆಯ ನಡುವೆಯೂ ಕೆಲ ಸಚಿವರು ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಪಟ್ಟುಹಿಡಿದಿರುವುದು ವಿವಾದವನ್ನು ಮತ್ತಷ್ಟು ಜಟಿಲಗೊಳಿಸಿದೆ.

ಕಳೆದ 15 ದಿನಗಳಿಂದ ನಡೆಯುತ್ತಿರುವ ಪ್ರಸಹನಕ್ಕೆ ಸಂಬಂಧಿ ಸಿದಂತೆ ಮೊದಲ ಬಾರಿಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ 'ಕೆಪಿಸಿಸಿ ಅಧ್ಯಕ್ಷ ಸ್ಥಾನ ಅಂಗಡಿ ಅಥವಾ ಮಾಧ್ಯಮಗಳ ಮುಂದೆ ಸಿಗುವುದಿಲ್ಲ' ಎಂದು ಅಸಮಾಧಾನ ಹೊರಹಾಕಿದ್ದಾರೆ. ಆದರೆ ಇನ್ನೊಂದೆಡೆ ಗೃಹ ಸಚಿವ ಪರಮೇಶ್ವರ ಸಚಿವ ಸ್ಥಾನ ಅಥವಾ ಕೆಪಿಸಿಸಿ ಅಧ್ಯಕ್ಷ ಸ್ಥಾನ ಎರಡನ್ನೂ ನಿಭಾಯಿಸುವುದು ಪ್ರಯಾಸದ ಕೆಲಸ. ಆದ್ದರಿಂದ ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಳ್ಳುವುದು ಉತ್ತಮ ಎನ್ನುವ ಪರೋಕ್ಷವಾಗಿ ತಿರುಗೇಟು ಕೊಟ್ಟಿದ್ದಾರೆ. ಈ ನಡುವೆ ಸತೀಶ್ ಜಾರಕಿಹೊಳಿ ಅವರು ತಮ್ಮ ವಾದವನ್ನು ಮುಂದುವರಿಸಿದ್ದಾರೆ. ಈ ಎಲ್ಲ ಗೊಂದಲಗಳ ನಿವಾರಣೆಗೆ ಕಾಂಗ್ರೆಸ್ ಮತ್ತೊಂದು 'ಸಂಧಾನ' ಸಭೆಗೆ ವೇದಿಕೆ ಸಿದ್ಧಪಡಿಸಿದ್ದಾರೆ. ಗಾಂಧಿ ಭಾರತ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಪೂರ್ವಭಾವಿ ಸಭೆ ನಡೆಸಲು ಬೆಳಗಾವಿಗೆ ಆಗಮಿಸುತ್ತಿರುವ ರಣದೀಪ್ ಸಿಂಗ್ ಸುರ್ಜೇವಾಲ, ಡಿ.ಕೆ.ಶಿವಕುಮಾರ್ ಹಾಗೂ ಸತೀಶ್ ಜಾರಕಿಹೊಳಿ ಅವರನ್ನು ಮುಖಾಮುಖಿ ಮಾಡಿಸಿ, ಮತ್ತೊಂದು ಸುತ್ತಿನ ಸಂಧಾನ ಸಭೆ ನಡೆಸಲು ತೀರ್ಮಾನಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಪಟ್ಟು ಸಡಿಲಿಸದಿರಲು ನಾಯಕರ ತೀರ್ಮಾನ: ಕೆಪಿಸಿಸಿ ಅಧ್ಯಕ್ಷರನ್ನು ಬದಲಾಯಿಸಬೇಕೆಂಬ ಬೇಡಿಕೆಯನ್ನು ಈಗಾಗಲೇ ಸಿದ್ದರಾಮಯ್ಯ ಆಪ್ತ ಬಣ ಹಲವು ಸಮಯದಲ್ಲಿ ಪ್ರಸ್ತಾಪಿಸಿದೆ. ಆದರೆ ಪದೇಪದೆ ಈ ರೀತಿಯ ಹೇಳಿಕೆಯಿಂದ ಪಕ್ಷಕ್ಕಾಗುತ್ತಿರುವ ಡ್ಯಾಮೇಜ್ ಕಂಟ್ರೋಲ್ ಮಾಡಲು, ಹೈಕಮಾಂಡ್ ಸೂಚನೆ ನೀಡಿದ್ದರೂ 'ಮೌನ'ವಾಗದಿರಲು ತೀರ್ಮಾನಿಸಿದ್ದಾರೆ. ಲೋಕ ಸಭಾ ಚುನಾವಣೆಯ ಬಳಿಕ ಅಧ್ಯಕ್ಷ ಸ್ಥಾನ ಬದಲಾವಣೆಯ ಪ್ರಸ್ತಾಪವನ್ನು ಹೈಕಮಾಂಡ್ ಮಾಡಿರುವುದನ್ನೇ ಬ್ರಹ್ಮಾಸ್ತ್ರದ ರೀತಿಯಲ್ಲಿ ಬಳಸಿಕೊಳ್ಳಲು ಈ ಎಲ್ಲ ನಾಯಕರು ಸಜ್ಜಾಗಿದ್ದಾರೆ ಎನ್ನಲಾಗಿದೆ.

ಭಂಡಾರಿಗೆ ವರದಿ ಕೇಳಿದ ಎಐಸಿಸಿ

ಪಕ್ಷದ ಹೈಕಮಾಂಡ್ ಸೂಚನೆಯ ಬಳಿಕವೂ ಹೇಳಿಕೆ ನೀಡುತ್ತಿರುವ ಸಚಿವರ ಬಗ್ಗೆ ವರದಿ ನೀಡುವಂತೆ ಪಕ್ಷದ ಹೈಕಮಾಂಡ್ ಕೆಪಿಸಿಸಿ ಕಾರ್ಯಾಧ್ಯಕ್ಷ ಮಂಜುನಾಥ್ ಭಂಡಾರಿಗೆ ಸೂಚನೆ ನೀಡಿದೆ. ಈ ಬಗ್ಗೆ ದೆಹಲಿಯಲ್ಲಿ ಮಾತನಾಡಿದ ಭಂಡಾರಿ, ಈಗಾಗಲೇ ಎಐಸಿಸಿ ಕರ್ನಾಟಕ ಉಸ್ತುವಾರಿ ರಣದೀಪ್ ಸುರ್ಜೇವಾಲ ಅವರು, ಪಕ್ಷ ತಾಯಿ ಇದ್ದಂತೆ, ಸರಕಾರ ಮಗುವಿದ್ದಂತೆ. ಯಾರೂ ಸಹ ಪಕ್ಷದ ಘನತೆಗೆ ಚ್ಯುತಿ ತರಬಾರದು ಎಂಬ ಸಂದೇಶ ನೀಡಿದ್ದಾರೆ. ಇದರ ಮಧ್ಯೆಯೂ ಕೆಲವು ನಾಯಕರು ಹೇಳಿಕೆ ನೀಡುತ್ತಿರುವುದು ಸರಿಯಲ್ಲ. ಕೆಲವು ಸಚಿವರು ಪದೇ ಪದೇ ಮಾತನಾಡುತ್ತಿದ್ದಾರೆ. ಇದು ಸರಿಯಲ್ಲ. ಆದರೆ, ಸಚಿವ ಆರ್. ಬಿ. ತಿಮ್ಮಾಪುರ, ಸತೀಶ್ ಜಾರಕಿಹೊಳಿ ಹಾಗೂ ಎಚ್.ಸಿ. ಮಹದೇವಪ್ಪ ಅವರು ಪದೇ ಪದೇ ಮಾತನಾಡುತ್ತಿದ್ದು, ಹೈಕಮಾಂಡ್ ಗಂಭೀರವಾಗಿ ಎಲ್ಲವನ್ನೂ ಗಮನಿಸುತ್ತಿದೆ. ಎಲ್ಲ ಸಚಿವರ ರಿಪೋರ್ಟ್ ಕಾರ್ಡ್‌ಗಳನ್ನು ಹೈಕಮಾಂಡ್ ಸೂಕ್ಷ್ಮವಾಗಿ ಗಮನಿಸುತ್ತಿದೆ. ನಾಯಕತ್ವದ ಬಗ್ಗೆ ಮಾತನಾಡಬಾರದು ಎಂದು ಹೈಕಮಾಂಡ್ ಸೂಚನೆ ನೀಡಿದ ಮೇಲೆಯೂ ಪಕ್ಷದ ಆದೇಶವನ್ನು ಉಲ್ಲಂಘಿಸುವವರಿಗೆ ಮುಂದಿನ ದಿನಗಳಲ್ಲಿ ಪರಿಣಾಮ ಬೀರಲಿದೆ ಪಕ್ಷದ ವರಿಷ್ಠರು ಸೂಚಿಸಿದ್ದಾರೆ ಎಂದು ಎಚ್ಚರಿಸಿದ್ದಾರೆ. ಆದರೆ ಈ ಎಚ್ಚರಿಕೆಗೆ ಬಹುತೇಕ ಸಚಿವರು ಡೋಂಟ್‌ಕೇರ್ ಎಂದಿದ್ದಾರೆ.

ಅಧ್ಯಕ್ಷ ಸ್ಥಾನದೊಂದಿಗೆ ಎರಡು ಪ್ರಮುಖ ಖಾತೆಗಳಿರುವುದರಿಂದ ಬದಲಾಯಿಸಿ, ಬೇರೆಯವರನ್ನು ಮಾಡಬೇಕೆಂದು ಕೇಳುತ್ತಾರೆ. ಈ ಹಿಂದೆ ನಾನು ಕೆಪಿಸಿಸಿ ಅಧ್ಯಕ್ಷನಾಗಿದ್ದ ಸಮಯದಲ್ಲಿಯೂ, ಇದೇ ಪರಿಸ್ಥಿತಿ ಇತ್ತು. ನಾನು ಸಚಿವ ಸ್ಥಾನದ ಬದಲಿಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನವನ್ನು ಆಯ್ಕೆ ಮಾಡಿಕೊಂಡಿದ್ದೆ.
– **ಡಾ.ಜಿ. ಪರಮೇಶ್ವರ,** ಗೃಹ ಸಚಿವ

ಕೆಪಿಸಿಸಿ ಅಧ್ಯಕ್ಷ ಸ್ಥಾನವಾಗಲಿ, ಪಕ್ಷದ ಯಾವುದೇ ಹುದ್ದೆಯಾಗಲಿ ಯಾವುದೋ ಅಂಗಡಿ ಅಥವಾ ಮಾಧ್ಯಮಗಳ ಮುಂದೆ ಮಾತಾಡಿದರೆ ಸಿಗುವುದಿಲ್ಲ. ನಾವು ಮಾಡುವ ಕೆಲಸ, ಶ್ರಮವನ್ನು ಪಕ್ಷದ ನಾಯಕರು ಗುರುತಿಸಿ ಅದಕ್ಕೆ ಸೂಕ್ತವಾಗಿ ಹುದ್ದೆ ನೀಡುತ್ತಾರೆ. ಏನಾದರೂ ಸಮಸ್ಯೆಯಿದ್ದರೆ ಅದನ್ನು ಹೈಕಮಾಂಡ್ ಮುಂದೆ ಹೇಳಲಿ.
– **ಡಿ.ಕೆ.ಶಿವಕುಮಾರ್,** ಕೆಪಿಸಿಸಿ ಅಧ್ಯಕ್ಷ

ಲೋಕಸಭಾ ಚುನಾವಣೆ ಬಳಿಕ ಅಧ್ಯಕ್ಷರನ್ನು ಬದಲಾಯಿಸುವುದಾಗಿ ಹೈಕಮಾಂಡ್ ಹೇಳಿತ್ತು. ಆದ್ದರಿಂದ ಈ ಗೊಂದಲ ಸೃಷ್ಟಿಯಾಗಿದೆ. ಲೋಕಸಭಾ ಚುನಾವಣೆ ನಡೆದು 6 ತಿಂಗಳು ಕಳೆದಿದೆ. ವಿಧಾನಸಭಾ ಚುನಾವಣೆವರೆಗೂ ಡಿಕೆ ಶಿವಕುಮಾರ್ ಅವರೇ, ಪೂರ್ಣ ಪ್ರಮಾಣದ ಅಧ್ಯಕ್ಷರಾಗಿ ಮುಂದುವರಿಯಲಿ. ಆದರೆ, ಹೈಕಮಾಂಡ್ ಈ ಗೊಂದಲವನ್ನು ನಿವಾರಿಸಬೇಕು.
– **ಕೆ.ಎನ್. ರಾಜಣ್ಣ,** ಸಹಕಾರ ಸಚಿವ

ನನಗೆ ನೋಟಿಸ್ ಕೊಟ್ಟರೆ ಅದರಿಂದ ಅನಾಹುತವೇನೂ ಆಗುವು ದಿಲ್ಲ, ನೋಟಿಸ್ ಕೊಡುವ ಅಧಿಕಾರ ಅವರಿಗಿದೆ, ನಾನು ಅದಕ್ಕೆ ತಕ್ಕ ಉತ್ತರ ನೀಡುತ್ತೇನೆ. ನಾನು ಅರ್ಧಗಂಟೆ ಮಾಧ್ಯಮದ ವರೊಂದಿಗೆ ಮಾತನಾಡಿದ ವಿಡಿಯೊ ಸಾಕ್ಷ್ಯ ಕೂಡ ನನ್ನ ಬಳಿ ಇದೆ. ಅದನ್ನೇ ಆಧಾರವಾಗಿಟ್ಟುಕೊಂಡು ಉತ್ತರ ನೀಡುವೆ.
– **ಸತೀಶ್ ಜಾರಕಿಹೊಳಿ,** ಲೋಕೋಪಯೋಗಿ ಸಚಿವ

ಮಧ್ಯರಾತ್ರಿ ಬಾಲಿವುಡ್ ನಟನ ಮನೆಗೆ ನುಗ್ಗಿದ ಆಗಂತುಕ, 6 ಬಾರಿ ಚಾಕು ಇರಿತ , ಶಸ್ತ್ರಚಿಕಿತ್ಸೆ ಯಶಸ್ವಿ, ಪ್ರಾಣಾಪಾಯದಿಂದ ಪಾರು

ಸೈಫ್ ಅಲಿ ಮೇಲೆ ದಾಳಿ, ತೀವ್ರ ಗಾಯ



ಮುಂಬೈ: ಮಧ್ಯ ರಾತ್ರಿ ತಮ್ಮ ಮನೆಗೆ ನುಗ್ಗಿದ ಆಗಂತುಕನೊಬ್ಬನ ಚಾಕು ದಾಳಿಗೆ ಗುರಿ ಯಾಗಿರುವ ಬಾಲಿವುಡ್ ನಟ ಸೈಫ್ ಅಲಿ ಖಾನ್ ತೀವ್ರ ಗಾಯಗೊಂಡು ಮುಂಬೈನ ಲೀಲಾವತಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮಧ್ಯರಾತ್ರಿ 2.30 ರ ಸುಮಾರಿಗೆ ಸೈಫ್ ಅಲಿ ಖಾನ್ ಮನೆಗೆ ನುಗ್ಗಿದ ಆಗಂತುಕ ಸುಮಾರು ಆರು ಬಾರಿ ಅವರಿಗೆ ಇರಿದಿದ್ದಾನೆ. ಕುತ್ತಿಗೆ, ಬೆನ್ನು, ಎಡಗೈ, ಬಲಗೈ ಸೇರಿದಂತೆ ದೇಹದ ಹಲವೆಡೆ ಗಂಭೀರ ಗಾಯಗೊಂಡಿರುವ ಸೈಫ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

ಸೈಫ್ ಅವರ ಬೆನ್ನುಹುರಿಗೆ ಹೊಕ್ಕಿದ್ದ ನೀಡಲ್ ಅನ್ನು ಶಸ್ತ್ರಚಿಕಿತ್ಸೆ ಮಾಡಿ ಹೊರತೆಗೆಯಲಾಗಿದೆ. ಸ್ಪೈನ್ ಫ್ಲ್ಯುಯಿಡ್ ಅನ್ನು ನಿಲ್ಲಿಸಲು ಶಸ್ತ್ರಚಿಕಿತ್ಸೆ ಮಾಡಲಾಗಿದೆ. ಅವರ ಎಡಗೈ ಮತ್ತು ಬಲಭಾಗದ ಕುತ್ತಿಗೆಯಲ್ಲಿ ಆಳವಾದ ಗಾಯಗಳಾಗಿವೆ. ಪ್ಲಾಸ್ಟಿಕ್ ಸರ್ಜರಿ ತಜ್ಞರ ಸಹಕಾರದೊಂದಿಗೆ ಈ ಭಾಗಗಳಿಗೂ ಶಸ್ತ್ರಚಿಕಿತ್ಸೆಗೆ ಮಾಡಲಾಗಿದೆ. ಈಗ ಅವರ ಆರೋಗ್ಯವು ಸುಸ್ಥಿತಿಯಲ್ಲಿದ್ದು, ಅಪಾಯದಿಂದ ಪಾರಾಗಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

→ 4

ಆಗಿದ್ದೇನು ?

ಕರೀನಾ ಕಪೂರ್ ಅವರ ತಂಡದ ಸದಸ್ಯರು ಹೇಳಿರುವ ಪ್ರಕಾರ ಕಳೆದ ರಾತ್ರಿ ಸೈಫ್ ಅಲಿ ಖಾನ್ ಮತ್ತು ಕರೀನಾ ನಿವಾಸದಲ್ಲಿ ಕಳ್ಳತನ ಯತ್ನ ನಡೆದಿತ್ತು. ಈ ಸಂದರ್ಭದಲ್ಲಿ ಪ್ರತಿರೋಧ ಒಡ್ಡಿದ್ದ ಸೈಫ್ ಅವರ ಮೇಲೆ ಕಳ್ಳ ದಾಳಿ ನಡೆಸಿದ್ದಾನೆ. ಬುಧವಾರ ಕರೀನಾ ಸಹೋದರಿ ಕರಿಷ್ಮಾ ಕಪೂರ್ ಮತ್ತು ಆಪ್ತರಾದ ಸೋನಮ್ ಕಪೂರ್ ಮತ್ತು ರಿಯಾ ಕಪೂರ್ ಜತೆ ಡಿನ್ನರ್ ಪಾರ್ಟಿ ಮಾಡಿದ್ದರು. ಈ ಬಗ್ಗೆ ನಟಿ ಗರ್ಲ್ಸ್ ನೈಟ್ ಇನ್ ಎಂಬ ಶೀರ್ಷಿಕೆಯಡಿ ಇನ್ಸ್ಟಾಗ್ರಾಂನಲ್ಲಿ ಮಾಹಿತಿ ಹಂಚಿಕೊಂಡಿದ್ದರು. ಪಾರ್ಟಿಯಿಂದ ಹಿಂತಿರುಗಿದ ಕರೀನಾ ಕಳ್ಳನನ್ನು ನೋಡಿ ಕಿರುಚಿದ್ದಾರೆ. ಈ ವೇಳೆ ಓಡಿ ಬಂದ ಕೆಲಸದಾಕೆಯ ಮೇಲೆ ದಾಳಿ ಮಾಡಲು ಮುಂದಾಗುತ್ತಿದ್ದಂತೆ ಕರೀನಾ ಮಗ ತೈಮೂರ್‌ನನ್ನು ಕರೆದುಕೊಂಡು ರೂಮ್‌ಗೆ ಓಡಿದ್ದರು. ಕಿರುಚಾಟ ಕೇಳಿ ಕೆಲಸದಾಕೆ ರಕ್ಷಣೆಗೆ ಮುಂದಾದ ಸೈಫ್ ಮೇಲೆ ಆತ ಚಾಕುವಿನಿಂದ ಹಲ್ಲೆ ನಡೆಸಿದ್ದಾನೆ.

8ನೇ ವೇತನ ಆಯೋಗ ರಚನೆಗೆ ಕೇಂದ್ರ ಸಂಪುಟ ನಿರ್ಧಾರ

ಕೇಂದ್ರ ನೌಕರರಿಗೆ ಸಂಕ್ರಾಂತಿ ಗಿಫ್ಟ್

ದೆಹಲಿ: ಸಂಕ್ರಾಂತಿ ಹಬ್ಬದ ಬೆನ್ನಿಗೇ ಕೇಂದ್ರ ಸರಕಾರಿ ನೌಕರರಿಗೆ ಸಿಹಿ ಸುದ್ದಿ ದೊರಕಿದ್ದು, ನೌಕರರ ವೇತನ ಮತ್ತು ಪಿಂಚಣಿದಾರರ ಭತ್ಯೆಗಳನ್ನು ಪರಿಷ್ಕರಿಸಲು 8ನೇ ವೇತನ ಆಯೋಗ ರಚಿಸಲು ಕೇಂದ್ರ ಸಚಿವ ಸಂಪುಟ ಗುರುವಾರ ಅನುಮೋದನೆ ನೀಡಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯಲ್ಲಿ 8ನೇ ವೇತನ ಆಯೋಗವನ್ನು ಸ್ಥಾಪಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಗುರುವಾರ ತಿಳಿಸಿದ್ದಾರೆ.

ಆಯೋಗದ ಅಧ್ಯಕ್ಷರು ಮತ್ತು ಇಬ್ಬರು ಸದಸ್ಯರನ್ನು ಶೀಘ್ರದಲ್ಲೇ ನೇಮಕ ಮಾಡಲಾಗುವುದು ಎಂದು ಸಚಿವರು ತಿಳಿಸಿದರು. 2025ರ ಬಜೆಟ್ ಘೋಷಣೆಗಳಿಗೆ ಮುನ್ನವೇ ಕೇಂದ್ರ ಸರಕಾರ ಈ ನಿರ್ಧಾರ ಪ್ರಕಟಿಸಿದೆ. 7 ನೇ ವೇತನ ಆಯೋಗವನ್ನು 2016 ರಲ್ಲಿ ಸ್ಥಾಪಿಸಲಾಗಿತ್ತು. ಇದರ ಅವಧಿ 2026 ರಲ್ಲಿ ಕೊನೆಗೊಳ್ಳಲಿದೆ. 7 ನೇ ವೇತನ ಆಯೋಗದ ಅವಧಿ ಮುಗಿಯುವ ಮುನ್ನ, ಕೇಂದ್ರ ಸರ್ಕಾರಿ ನೌಕರರ ವೇತನವನ್ನು ಪರಿಷ್ಕರಿಸಲು 8 ನೇ ವೇತನ ಆಯೋಗವನ್ನು ಸ್ಥಾಪಿಸುವ ನಿರ್ಧಾರವನ್ನು ತೆಗೆದುಕೊಂಡಿದೆ. ಸಂಪ್ರದಾಯದಂತೆ 10 ವರ್ಷಗಳಿಗೊಮ್ಮೆ ಅಂದರೆ 2026ರ ಜನವರಿ 1 ರಿಂದ 8ನೇ ವೇತನ ಆಯೋಗದ ವರದಿ ಜಾರಿಗೆ ಬರಬೇಕು.

ಇಬ್ಬರ ಗುಂಡಿಕ್ಕಿ ಕೊಂದು ದರೋಡೆ

ಬೀದರ್ ಡಿಸಿ ಕಚೇರಿ ಎದುರು ಹಾಡಹಗಲೇ ಎಟಿಎಂ ಸಿಬ್ಬಂದಿಗೆ ಗುಂಡು, 93 ಲಕ್ಷ ದರೋಡೆ
ಬೈಕಿನಲ್ಲಿ ಹಣದ ಬಾಕ್ಸ್ ಒಯ್ದ ಹಂತಕರು | ಹೈದರಾಬಾದ್‌ನಲ್ಲಿ ಒಬ್ಬ ಸೆರೆ, ಮತ್ತೊಬ್ಬ ಪರಾರಿ

ಬೀದರ್: ನಗರದ ಜಿಲ್ಲಾ ನ್ಯಾಯಾಲಯ ಹಾಗೂ ಜಿಲ್ಲಾಧಿಕಾರಿ ಕಚೇರಿಗೆ ಹೊಂದಿಕೊಂಡಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ (ಎಸ್.ಬಿ.ಐ) ಸೆಕ್ಯೂರಿಟಿ ಏಜೆನ್ಸಿ ಸಿಬ್ಬಂದಿ ಮೇಲೆ ಗುರುವಾರ ಹಾಡಹಗಲೇ ಸಿನಿಮೀಯ ಶೈಲಿಯಲ್ಲಿ ದಾಳಿ ನಡೆಸಿ ಇಬ್ಬರನ್ನು ಹತ್ಯೆಗೈದು 93 ಲಕ್ಷ ರು.ಗಳ ನಗದು ಇದ್ದ ಬಾಕ್ಸ್ ಅಪಹರಿಸಿ ಪರಾರಿಯಾಗಿದ್ದ ಇಬ್ಬರು ದರೋಡೆಕೋರರ ಪೈಕಿ ಒಬ್ಬನನ್ನು ಪೊಲೀಸರು ಹೈದರಾಬಾದ್ ನಲ್ಲಿ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ದುಷ್ಕರ್ಮಿಗಳ ಗುಂಡೇಟಿಗೆ ಬಲಿಯಾದ ಸಿಬ್ಬಂದಿಯನ್ನು ಗಿರೀಶ ವೆಂಕಟೇಶ್ (49) ಮತ್ತು ಶಿವಕುಮಾರ್ (26) ಎಂದು ಗುರುತಿಸಲಾಗಿದೆ.

ಹೇಗೆ ನಡೆಯಿತು ದಾಳಿ?

ಎಸ್‌ಬಿಐ ಏಜೆನ್ಸಿ ಸಿಬ್ಬಂದಿ ಬೆಳಗ್ಗೆ 10.55ರಿಂದ 11 ಗಂಟೆ ಸುಮಾರಿಗೆ ತಮ್ಮ ವಾಹನದಲ್ಲಿ ಹಣದ ಸಮೇತ ಬ್ಯಾಂಕಿಗೆ ಬಂದಿದ್ದರು. ಈ ವೇಳೆ ಬೈಕಿನಲ್ಲಿ ಬಂದ ಅಪರಿಚಿತರು ಹಣ ಕಸಿದುಕೊಳ್ಳಲು ಯತ್ನಿಸಿದ್ದಾರೆ. ಸಿಬ್ಬಂದಿ ಹಣ ಕೊಡದಿದ್ದಾಗ ಖಾರದ ಪುಡಿ ಎರಚಿ, ಬಳಿಕ ಗುಂಡಿನ ದಾಳಿ ನಡೆಸಿ, 93 ಲಕ್ಷ ರು.ಗಳೊಂದಿಗೆ ಸ್ಥಳದಿಂದ ಪರಾರಿಯಾದರು. ಈ ದಾಳಿಯಲ್ಲಿ ಗಿರೀಶ್ ವೆಂಕಟೇಶ್ ಸ್ಥಳದಲ್ಲೇ ಮೃತಪಟ್ಟರೆ, ಗಂಭೀರವಾಗಿ ಗಾಯಗೊಂಡ ಶಿವಕುಮಾರ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ. ಬ್ಯಾಂಕಿನ ಕಚೇರಿ ಎದುರು ಗಿರೀಶ್ ದೇಹ ರಕ್ತದ ಮಡುವಿನಲ್ಲಿ ಬಿದ್ದಿತ್ತು. ನ್ಯಾಯಾಲಯ ಹಾಗೂ ಜಿಲ್ಲಾಧಿಕಾರಿ ಕಚೇರಿ ಎದುರು ಸೇರಿದ್ದ ನೂರಾರು ಜನ ಜಮಾಯಿಸಿದರು. ಸ್ಥಳಕ್ಕೆ ಧಾವಿಸಿದ ಕುಟುಂಬಸ್ಥರ ರೋದನ ಮುಗಿಲು ಮುಟ್ಟಿತ್ತು. ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ಸೇರಿದಂತೆ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿದ್ದರು.

ಪರಾರಿ ವಿಡಿಯೋ ವೈರಲ್

ದುಷ್ಕರ್ಮಿಗಳು ಎಟಿಎಂ ಸಿಬ್ಬಂದಿ ಮೇಲೆ ಗುಂಡು ಹಾರಿಸಿ ಹಣದ ಪೆಟ್ಟಿಗೆಯನ್ನು ರಾಜಾರೋಷವಾಗಿ ಬೈಕ್ ಮೇಲೆ ಇಟ್ಟುಕೊಂಡು ಪರಾರಿಯಾದ ವಿಡಿಯೋ ವೈರಲ್ ಆಗಿದೆ. ಕಪ್ಪು ಬಣ್ಣದ ಜಾಕೆಟ್ ಹಾಗೂ ಹೆಲ್ಮೆಟ್ ಧರಿಸಿದ ಕಳ್ಳರು ಬೈಕ್ ಮೇಲೆ ತೆರಳಿದ ದೃಶ್ಯ ವೈರಲ್ ಆಗಿದೆ.

ಮಿಂಚಿನ ಕಾರ್ಯಾಚರಣೆ

ಈ ಕೃತ್ಯದ ಬೆನ್ನಲ್ಲೇ ಬೀದರ್ ಪೊಲೀಸರ 9 ತಂಡಗಳು ಹೈದರಾಬಾದ್ ಹಾಗೂ ಇತರ ಸ್ಥಳಗಳಿಗೆ ಧಾವಿಸಿ ದರೋಡೆಕೋರರಿಗಾಗಿ ಶೋಧನೆ ನಡೆಸಿತು. ಹೈದರಾಬಾದ್‌ನ ಖಾಸಗಿ ಟ್ರಾವೆಲ್ಸ್ ಮೂಲಕ ಛತ್ತೀಸ್ ಗಢ ರಾಜಧಾನಿ ರಾಯಪುರಕ್ಕೆ ಟಿಕೆಟ್ ಬುಕ್ ಮಾಡಿದ್ದ ದುಷ್ಕರ್ಮಿಗಳ ಬಳಿಯಿದ್ದ ಚೀಲದ ಬಗ್ಗೆ ಮ್ಯಾನೇಜರ್ ಸಂಶಯ ವ್ಯಕ್ತಪಡಿಸಿದ್ದರು. ಇದೇ ವೇಳೆಗೆ ಪೊಲೀಸರ ತಂಡ ಅಲ್ಲಿಗೆ ತಲುಪಿದಾಗ ಗುಂಡಿನ ಚಕಮಕಿ ನಡೆಯಿತು. ಒಬ್ಬ ಸೆರೆಸಿಕ್ಕಿದರೆ ಮತ್ತೊಬ್ಬ ಪರಾರಿಯಾಗಿದ್ದಾನೆ.

ಚಾಮುಂಡಿ ದರ್ಶನ ಪಡೆದ ದರ್ಶನ್

ಮೈಸೂರು: ನಟ ದರ್ಶನ್ ಗುರುವಾರ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ತಾಯಿ ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿದರು.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಸಿಲುಕಿ ಜೈಲುಸೇರಿದ ಬಳಿಕ ಮೈಸೂರಿನತ್ತ ಸುಳಿದಿರಲಿಲ್ಲ. ಇತ್ತೀಚೆಗಷ್ಟೇ ಜಾಮೀನು ದೊರೆತ ಹಿನ್ನೆಲೆಯಲ್ಲಿ ಬೆಟ್ಟಕ್ಕೆ ಪತ್ನಿ ವಿಜಯಲಕ್ಷ್ಮಿ ಹಾಗೂ ಸ್ನೇಹಿತರ ಸಮೇತ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಕಳೆದ ಕೆಲ ದಿನಗಳಿಂದ ಟೆಂಪಲ್ ರನ್ ಮಾಡುತ್ತಿರುವ ನಟ ದರ್ಶನ್ ಆಗಮನದ ಮಾಹಿತಿ ಸಿಗುತ್ತಿದ್ದಂತೆ ನಿತ್ಯ ಭಕ್ತರ ಹೊರತಾಗಿ ಅಭಿಮಾನಿ ಬಳಗ ಕೂಡ ದೇವಸ್ಥಾನದ ಆವರಣದಲ್ಲಿ ಜಮಾಯಿಸಿತ್ತು.

ಇಸ್ರೋ ಮತ್ತೊಂದು ಐತಿಹಾಸಿಕ ಸಾಧನೆ, ಡಾಕಿಂಗ್ ಸಕ್ಸಸ್

ಇಸ್ರೋ ಸ್ಪಾಡೆಕ್ಸ್ ಯೋಜನೆ ಯಶಸ್ವಿ

ಬೆಂಗಳೂರು: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ತನ್ನ ಸ್ಪಾಡೆಕ್ಸ್ ಮಿಷನ್ ಅಡಿಯಲ್ಲಿ ದೇಶದ ಮೊದಲ ಉಪಗ್ರಹ ಡಾಕಿಂಗ್ ಪ್ರಯೋಗವನ್ನು ಗುರುವಾರ ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಇದರೊಂದಿಗೆ ಬಾಹ್ಯಾಕಾಶ ನಿಲ್ದಾಣ ನಿರ್ಮಿಸುವತ್ತ ದೇಶ ದಿಟ್ಟ ಹೆಜ್ಜೆ ಇಟ್ಟಿದೆ.

ಇದರೊಂದಿಗೆ ಅಮೆರಿಕ, ರಷ್ಯಾ ಮತ್ತು ಚೀನಾ ನಂತರ ಈ ಸಾಧನೆ ಮಾಡಿದ ನಾಲ್ಕನೇ ರಾಷ್ಟ್ರ ಎಂಬ ಹೆಗ್ಗಳಿಕೆಗೆ ಭಾರತ ಪಾತ್ರವಾಗಿದೆ. ಇದು ನಿಜಕ್ಕೂ ಭಾರತಕ್ಕೆ ಹೆಮ್ಮೆಯ ಕ್ಷಣ. ಈ ಐತಿಹಾಸಿಕ ಸಾಧನೆಗಾಗಿ ಇಸ್ರೋವನ್ನು ಪ್ರಧಾನಿ ಮೋದಿ ಅಭಿನಂದಿಸಿದ್ದಾರೆ. ಕಳೆದ ವರ್ಷಾಂತ್ಯ ಡಿಸೆಂಬರ್ 30ರಂದು ಪಿಎಸ್‌ಎಲ್ ವಿ-ಸಿ 60 ರಾಕೆಟ್‌ನಲ್ಲಿ ಉಡಾವಣೆಯಾದ ಎರಡು ಉಪಗ್ರಹಗಳಾದ ಎಸ್‌ಡಿಎಕ್ಸ್ 01 ಮತ್ತು ಎಸ್‌ಡಿಎಕ್ಸ್ 02 ಡಾಕಿಂಗ್‌ನಲ್ಲಿ ಒಳಗೊಂಡಿತ್ತು. ಸತತ ಪ್ರಯತ್ನಗಳ ನಂತರ ಉಪಗ್ರಹಗಳನ್ನು ಯಶಸ್ವಿಯಾಗಿ ಡಾಕಿಂಗ್ ಮಾಡಲಾಯಿತು. ಬಾಹ್ಯಾಕಾಶ ನೌಕೆ ಡಾಕಿಂಗ್ ಯಶಸ್ವಿಯಾಗಿ ಪೂರ್ಣ ಗೊಂಡಿದೆ. ಇದು ಒಂದು ಐತಿಹಾಸಿಕ ಕ್ಷಣ ಎಂದು ಇಸ್ರೊ ಪ್ರಕಟಿಸಿದೆ.

ವಿವರಪುಟ → 12

ಮುಂದಿನ ಸಂಪುಟದಲ್ಲಿ ಜಾತಿಗಣತಿ ವರದಿ ಮಂಡನೆ: ಪಾಟೀಲ್

ಬೆಂಗಳೂರು: ಬಹುನಿರೀಕ್ಷಿತ ಜಾತಿಗಣತಿಯನ್ನು ಮುಂದಿನ ಸಚಿವ ಸಂಪುಟ ಸಭೆ ಯಲ್ಲಿ, ಸಂಪುಟದ ಮುಂದಿಡಲು ತೀರ್ಮಾನಿ ಸಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಸ್ಪಷ್ಟಪಡಿಸಿದರು.

ಕಾಂತರಾಜು ಸಮಿತಿ 2015ರಲ್ಲಿ ಮಂಡಿಸಿರುವ ಸಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಬಹಿರಂಗಪಡಿಸಬೇಕು ಎನ್ನುವ ಆಗ್ರಹ ಹಲವು ದಿನಗಳಿಂದ ಇದೆ. ಆದರೆ ಜಾತಿ ಗಣತಿ ಬಹಿರಂಗಕ್ಕೆ ಪರ-ವಿರೋಧ ಮಾತಿರುವುದರಿಂದ ಈ ಹಿಂದಿನ ಸರಕಾರಗಳು ಸಾಹಸಕ್ಕೆ ಕೈಹಾಕಿಲ್ಲ. ಆದರೀಗ ಸಿದ್ದರಾಮಯ್ಯ ಅವರು ಮುಂದಿನ ಸಂಪುಟದಲ್ಲಿ ಮಂಡಿಸಲು ತೀರ್ಮಾನಿಸಿದ್ದಾರೆ. ಗುರುವಾರ ವಿಧಾನಸೌಧದಲ್ಲಿ ನಡೆದ ಸಚಿವ ಸಂಪುಟದ ಅಜೆಂಡಾ ಕಾಪಿಯಲ್ಲಿ ಜಾತಿಗಣತಿಯನ್ನು ಮುಚ್ಚಿದ ಲಕೋಟೆಯಲ್ಲಿ ಬಹಿರಂಗಪಡಿಸಬೇಕು ಎನ್ನುವ ವಿಷಯವಿತ್ತು. ಮುಂದಿನ ವಾರ ಬೆಳಗಾವಿಯಲ್ಲಿ ಗಾಂಧಿ ಭಾರತ ಕಾರ್ಯಕ್ರಮವಿರುವ ಸಮಯದಲ್ಲಿ ಗೊಂದಲ ಬೇಡವೆಂದು ಅಜೆಂಡಾವನ್ನು ಮುಂದಿನ ಸಚಿವ ಸಂಪುಟ ಸಭೆಗೆ ಮುಂದೂಡಲು ತೀರ್ಮಾನಿಸಲಾಗಿದೆ ಎಂದು ತಿಳಿದುಬಂದಿದೆ.

ಫನ್‌ತರಂಗ
– ರಘುಪತಿ ಶೃಂಗೇರಿ –

ಎರಡಕ್ಕಿಂತ ಹೆಚ್ಚು ಮಕ್ಕಳಿದ್ದರೆ ಮಾತ್ರಾ ಸ್ಥಳೀಯ ಚುನಾವಣೆಗೆ ಸ್ಪರ್ಧೆ ಮಾಡಲು ಅವಕಾಶ ನೀಡಲಾಗುವುದು – ಆಂಧ್ರ ಸಿಎಂ
ಸುದ್ದಿ



ಪ್ರಾದೇಶಿಕ ಪಕ್ಷಕ್ಕೂ ಬೇಕಿದೆ ಜಾರಕಿಹೊಳಿ ಸಹೋದರರು

ರಾಜ್ಯ ರಾಜಕಾರಣ: ಮತ್ತೆ ಸಾಹುಕಾರ್ ದರ್ಬಾರ್

ಬೆಂಗಳೂರು: ಎರಡು ರಾಷ್ಟ್ರೀಯ ಪಕ್ಷಗಳು ಸೇರಿದಂತೆ ಪ್ರಾದೇಶಿಕ ಪಕ್ಷಕ್ಕೆ ಬೆಳಗಾವಿಯೇ ಚಟುವಟಿಕೆಯ ಕೇಂದ್ರ ಸ್ಥಾನವಾಗಿದೆ. ಪ್ರತಿಪಕ್ಷಗಳಲ್ಲಿದ್ದರೂ ಜಾರಕಿಹೊಳಿ ಸಹೋದರರೇ ಈ ಮೂರು ಪಕ್ಷಗಳಿಗೂ ಹೈಕಮಾಂಡ್ ಎನ್ನುವಂತಾಗಿದ್ದು, ಅವರ ಸುತ್ತಲೇ ರಾಜ್ಯ ರಾಜಕಾರಣ ಗಿರಕಿ ಹೊಡೆಯುವಂತಾಗಿದೆ.

ವಿಶ್ವವಾಣಿ ವಿಶೇಷ

ಬಿಜೆಪಿಯಲ್ಲಿದ್ದ ಬಣ ಬಡಿದಾಟ ಈಗ ಕಾಂಗ್ರೆಸಿಗೂ ವಕ್ಕರಿಸಿಕೊಂಡಿದ್ದು ಗದ್ದುಗೆ ಗುದ್ದಾಟ ಕಳೆದ ವಾರದಿಂದ ತಾರಕಕ್ಕೇರಿದೆ. ಇತ್ತ ಪ್ರಾದೇಶಿಕ ಪಕ್ಷ ಜೆಡಿಎಸ್ ತನ್ನ ಅಸ್ತಿತ್ವ ಉಳಿಸಿಕೊಳ್ಳಲು ಮತ್ತದೇ ಜಾರಕಿಹೊಳಿ ಕುಟುಂಬವನ್ನು ಆಶ್ರಯಿಸಿದಂತಾಗಿದೆ. ರಾಷ್ಟ್ರೀಯ ಪಕ್ಷಗಳಾದ ಬಿಜೆಪಿ ಹಾಗೂ ಕಾಂಗ್ರೆಸ್ ಪಕ್ಷದ ರಾಜ್ಯ ಅಧ್ಯಕ್ಷರ ಸ್ಥಾನದ ಮೇಲೆ ಜಾರಕಿಹೊಳಿ ಬ್ರದರ್ಸ್ ಕಣ್ಣಿಟ್ಟಿದ್ದಾರೆ. ಕೆಪಿಸಿಸಿ ಅಧ್ಯಕ್ಷರು ನಾನಾಗಲಿ ಎಂದು ಕೆಲವರ ಆಶಯವಾಗಿದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದರೆ, ಇತ್ತ ಬಿಜೆಪಿಯಲ್ಲಿ ರಾಜ್ಯಾಧ್ಯಕ್ಷರನ್ನೇ ಬದಲಾಯಿಸಿ , ಹೊಸ ಅಧ್ಯಕ್ಷರ ನೇಮಿಸಿ ಎಂಬ ಹೋರಾಟದಲ್ಲಿ ರಮೇಶ್ ಜಾರಕಿಹೊಳಿ ತಂತ್ರ ಹೂಡಿದ್ದಾರೆ.

ಕೆಪಿಸಿಸಿ ಅಧ್ಯಕ್ಷತೆ ಮೇಲೆ ಜಾರಕಿಹೊಳಿ ಕಣ್ಣು..? ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ಸಿಎಂ ಬದಲಾವಣೆ / ಇಲ್ಲವೇ ಒಪ್ಪಂದವಾಗಿದೆ ಎನ್ನಲಾದ ವಿಚಾರ ಸಂಬಂಧ ಕಳೆದ 15 ದಿನಗಳಿಂದ ನಡೆದಿರುವ ಚರ್ಚೆ ತಾರಕ್ಕೇರಿದೆ. ಇದೇ ವೇಳೆ ಡಿಸಿಎಂ ಹುದ್ದೆ ಹಾಗೂ ಕೆಪಿಸಿಸಿ ಅಧ್ಯಕ್ಷರ ಪಟ್ಟ ಹಾಗೂ ಸಚಿವ ಸ್ಥಾನವೂ ಈಗ ಚರ್ಚಿತ ವಿಚಾರವಾಗಿದೆ. ಹೈಕಮಾಂಡ್ ಮುಂದೆ ನಡೆದ ಒಪ್ಪಂದದಂತೆ ಸಿಎಂ ಬದಲಾವಣೆಯ ವಿಚಾರ ಬಂದಾಗ , ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಈಗ ಹೊಂದಿರುವ ಹುದ್ದೆಗಳ ಮೇಲೂ ಚರ್ಚೆಯಾಗುತ್ತಿದೆ. ಕಾಂಗ್ರೆಸ್‌ನಲ್ಲಿ ಒಬ್ಬರಿಗೆ ಒಂದು ಹುದ್ದೆ ಎಂಬ ವಿಚಾರ ಮುನ್ನಲೆಗೆ ಬಂದಿದ್ದು ಕೆಪಿಸಿಸಿ ಅಧ್ಯಕ್ಷ ಪಟ್ಟದ ಮೇಲೆ ಈಗ ಸಚಿವ ಸತೀಶ್ ಜಾರಕಿಹೊಳಿ ಕಣ್ಣಿಟ್ಟಿದ್ದಾರೆ.

ಈ ಸಮಯದಲ್ಲೇ ಹುದ್ದೆ ಹಾಗೂ ಪಕ್ಷದ ವಿಚಾರವಾಗಿ ಬಹಿರಂಗ ಹೇಳಿಕೆ ನೀಡುವಂತಿಲ್ಲ ಹಾಗೂ ಡಿನ್ನರ್ ಪಾಲಿಟಿಕ್ಸ್ ಮಾಡುವಂತಿಲ್ಲ ಎಂದು ಹೈಕಮಾಂಡ್ ಸೂಚಿಸಿದ್ದರೂ, ಕೆಪಿಸಿಸಿಗೆ ಪೂರ್ಣಾವಧಿ ಅಧ್ಯಕ್ಷರ ನೇಮಕ ಆಗಲಿ ಎಂದು ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

→ 4

ಬಣ ಬಡಿದಾಟ ನಿರಂತರ

ಬಿಜೆಪಿಯಲ್ಲಿ ಬಣ ಬಡಿದಾಟ ಆರಂಭವಾಗಿ ಆರು ತಿಂಗಳಾಗಿದೆ. ಮೊದಲಿಗೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ರಾಜ್ಯಾಧ್ಯಕ್ಷರ ಬದಲಾವಣೆಗೆ ಕೂಗು ಹಾಕಿದ್ದರು. ನಂತರ ಈ ವಿಚಾರ ಕೇಂದ್ರದ ಶಿಸ್ತು ಸಮಿತಿಯ ಮುಂದೆ ಹೋಗಿತ್ತಾದರೂ, ವಕ್ಫ್ ಹೋರಾಟವೇ ಪ್ರಮುಖವಾಗಿತ್ತು. ಇನ್ನು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಬದಲಾವಣೆ ಆಗಲೇಬೇಕು ಎಂದು ಯತ್ನಾಳ್ ಹೇಳಿದ್ದಲ್ಲದೆ ಪ್ರತ್ಯೇಕವಾಗಿ ಬಣ ಮಾಡಿಕೊಂಡು ವಕ್ಫ್ ಹೋರಾಟ ಮಾಡಿದ್ದರು. ಇದಾದ ನಂತರ ರಾಜ್ಯಾಧ್ಯಕ್ಷರ ಬಣ ಬಿಜೆಪಿ ಕಚೇರಿ ಸೇರಿದಂತೆ ಹಲವೆಡೆ ಸರಣಿ ಸಭೆಗಳನ್ನು ಮಾಡಿ ತಮಗಿರುವ ಬಲ ಪ್ರದರ್ಶಿಸಿಕೊಂಡಿತ್ತು. ಅಲ್ಲದೆ ಕೇಂದ್ರದ ನಾಯಕರು ಮಧ್ಯ ಪ್ರವೇಶಿಸಿ ರಾಜ್ಯ ಘಟಕದಲ್ಲಾಗಿರುವ ಸಮಸ್ಯೆ ಬಗೆಹರಿಸಬೇಕೆಂದು ಮನವಿ ಮಾಡಿದ್ದರು. ಇದೇ ವೇಳೆ ಮಾಜಿ ಸಿಎಂ ಯಡಿಯೂರಪ್ಪ ಅಖಾಡಕ್ಕಿಳಿದಾಗ ಹೊಸ ಬಿಜೆಪಿ ರಾಜ್ಯಾಧ್ಯಕ್ಷರ ನೇಮಕಕ್ಕೆ ಬಿಎಸ್‌ವೈ ಸಹಕರಿಸಲಿ ಎಂದು ರಮೇಶ್ ಆಗ್ರಹಿಸಿದ್ದರು. ಇದಕ್ಕೆ ಪ್ರತಿಕ್ರಯಿಸಿದ್ದ ವಿಜಯೇಂದ್ರ ಬಿಎಸ್‌ವೈ ಬಗ್ಗೆ ಮಾತನಾಡುವ ಹಕ್ಕು ರಮೇಶ್‌ಗಿಲ್ಲ ಎಂದು ಎಚ್ಚರಿಕೆ ಕೊಟ್ಟಿದ್ದರು. ಬಿಜೆಪಿಯ ಕೇಂದ್ರ ನಾಯಕರನ್ನು ವಿಜಯೇಂದ್ರ ಹಾಗೂ ಭಿನ್ನ ಬಣದ ನಾಯಕರು ಭೇಟಿಯಾಗಿದ್ದರೂ ಕೂಡ ರಾಜ್ಯದಲ್ಲಿ ಬಣ ಬಡಿದಾಟ ನಿಂತಿಲ್ಲ. ಬಿಜೆಪಿಯಲ್ಲಿ ಪ್ರಮುಖ ನಾಯಕರಿದ್ದರೂ ಕೂಡ ಇಲ್ಲೂ ರಮೇಶ್ ಜಾರಕಿಹೊಳಿ ಅವರ ಅಬ್ಬರ ಮುಂದುವರೆದಿದೆ.

ಏ.16, 17ಕ್ಕೆ ಸಿಇಟಿ ಪರೀಕ್ಷೆ

ಬೆಂಗಳೂರು: ಕರ್ನಾಟಕ ಪರೀಕ್ಷಾ ಪ್ರಾಧಿಕಾರ 2025ರ ಸಿಇಟಿ ಪರೀಕ್ಷೆ ದಿನಾಂಕವನ್ನು ಪ್ರಕಟಿಸಿದ್ದು, ಏಪ್ರಿಲ್ 16 ಹಾಗೂ 17 ರಂದು ಸಿಇಟಿ ಪರೀಕ್ಷೆ ನಡೆಯಲಿದೆ ಎಂದು ಮಾಹಿತಿ ನೀಡಿದೆ. ಜನವರಿ 23ರಿಂದ ಅರ್ಜಿ ಸಲ್ಲಿಕೆ ಆರಂಭವಾಗಲಿದ್ದು, ಈ ವರ್ಷದಿಂದ ಆಯಾ ಕಾಲೇಜುಗಳಲ್ಲಿ ದಾಖಲೆ ಪರಿಶೀಲನೆ ನಡೆಯಲಿದೆ ಎಂದು ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ.

ಏಪ್ರಿಲ್ 16ರಂದು ಬೆಳಿಗ್ಗೆ 10.30ರಿಂದ ಭೌತವಿಜ್ಞಾನ, ಮಧ್ಯಾಹ್ನ 2.30ರಿಂದ ರಸಾಯನ ವಿಜ್ಞಾನ ಪರೀಕ್ಷೆ ನಡೆಯಲಿದೆ. ಏಪ್ರಿಲ್ 17ರಂದು ಬೆಳಿಗ್ಗೆ ಗಣಿತ ಮತ್ತು ಮಧ್ಯಾಹ್ನ ಜೀವವಿಜ್ಞಾನ ವಿಷಯಗಳ ಪರೀಕ್ಷೆಗಳು ನಡೆಯಲಿವೆ. ಏ.18ರಂದು ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ ನಡೆಯಲಿದೆ ಎಂದು ಕೆಇಎ ಮಾಹಿತಿ ನೀಡಿದೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಉನ್ನತ ಶಿಕ್ಷಣ ಸಚಿವ ಎಂಸಿ ಸುಧಾಕರ್, ''ಇದೇ ಮೊದಲ ಭಾರಿಗೆ ವರ್ಷದಲ್ಲಿ ನಡೆಯುವ ಎಲ್ಲಾ ವೃತ್ತಿಪರ ಕೋರ್ಸ್‌ಗಳ ಪ್ರವೇಶ ಪರೀಕ್ಷೆಗಳ ಬಗ್ಗೆ ಒಮ್ಮೆಲೇ ಮಾಹಿತಿ ನೀಡಲಾಗಿದೆ'' ಎಂದು ತಿಳಿಸಿದ್ದಾರೆ.

ಸಮಾಚಾರ ಸಣ್ಣದಲ್ಲ

ಪೆಟ್ರೋಲ್ ಸುರಿದು ಟೆಕ್ಕಿ ಯುವತಿ ಆತ್ಮಹತ್ಯೆ

ಬೆಂಗಳೂರು: ಪೆಟ್ರೋಲ್ ಸುರಿದುಕೊಂಡು ಟೆಕ್ಕಿ ಯುವತಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಎಚ್ಎಎಲ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.ಸುಹಾಸಿ ಸಿಂಗ್ (24) ಆತ್ಮಹತ್ಯೆ ಮಾಡಿಕೊಂಡ ಯುವತಿ. ಯುವತಿಯ ಖಾಸಗಿ ವಿಡಿಯೊ ಬಹಿರಂಗಪಡಿಸುವ

ಬೆದರಿಕೆ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಜ.12ರಂದು ಹೋಟೆಲಿನಲ್ಲಿ ಆಕೆ ಪೆಟ್ರೋಲ್ ಸುರಿದು ಆತ್ಮಹತ್ಯೆಗೆ ಯತ್ನಿಸಿದ್ದಳು. ಗಂಭೀರ ಗಾಯಗೊಂಡಿದ್ದ ಯುವತಿಯನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಸುಹಾಸಿ ಮೃತಪಟ್ಟಿದ್ದಾಳೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯುವತಿಯ ಮಾವ ಪ್ರವೀಣ್ ಸಿಂಗ್‌ನ್ನು ಪೊಲೀಸರು ಬಂಧಿಸಿದ್ದಾರೆ.

ಏನಿದು ಪ್ರಕರಣ?: ಸುಹಾಸಿ ಸಿಂಗ್ ಮತ್ತು ಪ್ರವೀಣ್ ಸಿಂಗ್ ಸಂಬಂಧಿಗಳು. ಇಬ್ಬರೂ ಒಂದೇ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ಈ ವೇಳೆ ಇಬ್ಬರ ನಡುವೆ ಉತ್ತಮ ಸಂಬಂಧ ಬೆಳೆದಿದೆ. ಇಬ್ಬರು ಒಟ್ಟಿಗೆ ಹೊರಗಡೆ ಹೋಗುತ್ತಿದ್ದರು. ಹೀಗೆ ಹೊರಗಡೆ ಹೋಗಿದ್ದಾಗ ಹಲವಾರು ಬಾರಿ ಲೈಂಗಿಕ ಕ್ರಿಯೆ ನಡೆಸಿದ್ದರು. ಈ ಸಂದರ್ಭದಲ್ಲಿ ಪ್ರವೀಣ್ ಸಿಂಗ್ ವಿಡಿಯೊ ರೆಕಾರ್ಡ್ ಮಾಡಿದ್ದಾನೆ. ನಂತರ ವಿಡಿಯೊ ಇಟ್ಟುಕೊಂಡು ಸುಹಾಸಿಯನ್ನು ಬ್ಲ್ಯಾಕ್‌ಮೇಲ್ ಮಾಡಿ ಲೈಂಗಿಕ ಕ್ರಿಯೆಗೆ ಬರುವಂತೆ ಆಹ್ವಾನಿಸುತ್ತಿದ್ದ. ಒಂದು ವೇಳೆ ಸಹಕರಿಸದಿದ್ದರೆ ಪೋಷಕರಿಗೆ ವಿಡಿಯೊ ತೋರಿಸುವುದಾಗಿ ಬೆದರಿಸುತ್ತಿದ್ದ. ಬೆದರಿಕೆಗೆ ಮಣಿದು ಪ್ರವೀಣ್ ಹೇಳಿದಾಗ ಸುಹಾಸಿ ಬರುತ್ತಿದ್ದಳು. ಕೆಲ ತಿಂಗಳಿನಿಂದ ಸುಹಾಸಿ ಸಿಂಗ್ ಬೇರೊಬ್ಬ ಹುಡುಗನ ಜತೆ ಸುತ್ತಾಟ ಆರಂಭಿಸಿದ್ದಳು. ಈ ವಿಚಾರ ಪ್ರವೀಣ್‌ಗೆ ಗೊತ್ತಾಗಿದೆ. ಜನವರಿ 12 ರಂದು ಪ್ರವೀಣ್ ಹೋಟೆಲಿಗೆ ಬರುವಂತೆ ಆಹ್ವಾನಿಸಿದ್ದಾನೆ. ಈ ಆಹ್ವಾನ ಆಕೆ ತಿರಸ್ಕರಿಸಿದ್ದಾಳೆ. ಈ ವೇಳೆ ಪ್ರವೀಣ್ ಬಾರದೇ ಇದ್ದರೆ ವಿಡಿಯೋ ವೈರಲ್ ಮಾಡುತ್ತಿದ್ದೇನೆ ಎಂದು ಬೆದರಿಸಿದ್ದಾನೆ. ಈತನ ಬ್ಲ್ಯಾಕ್‌ಮೇಲ್‌ಗೆ ಹೆದರಿ ಸುಹಾಸಿ ಎಚ್‌ಎಎಲ್ ಬಳಿ ಹೋಟೆಲಿಗೆ ಪೆಟ್ರೋಲ್ ಜತೆ ಬಂದಿದ್ದಾಳೆ. ಪ್ರವೀಣ್ ನೋಡಿದ ಹೋಟೆಲಿನಲ್ಲೇ ಪೆಟ್ರೋಲ್ ಸುರಿದು ಆತ್ಮಹತ್ಯೆಗೆ ಯತ್ನಿಸಿದ್ದಾಳೆ. ಕೂಡಲೇ ಪ್ರವೀಣ್ ಆಕೆಯನ್ನು ರಕ್ಷಿಸಿದ್ದಾನೆ. ಗಂಭೀರ ಗಾಯಗೊಂಡ ಸುಹಾಸಿ ಯನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾಳೆ.

ಪ್ರಜ್ವಲ್ ಎಂದ ಮಾತ್ರಕ್ಕೆ ಕಾನೂನು ಬದಲಿಸಲಾಗದು

ಹೈಕೋರ್ಟ್ ಸ್ಪಷ್ಟನೆ | ಆರೋಪಿಗೆ ಮಹಿಳೆಯರ ವಿಡಿಯೊ ಚಿತ್ರ ನೀಡಲು ನಕಾರ

ಬೆಂಗಳೂರು: ಹಾಲಿ ಪ್ರಕರಣಕ್ಕೆ ಹೊರತಾದ ವಿಡಿಯೊ, ಚಿತ್ರಗಳನ್ನು ಒದಗಿಸಲಾಗದು ಎಂದು ಸ್ಪಷ್ಟವಾಗಿ ನಿರಾಕರಿಸಿದ ಹೈಕೋರ್ಟ್, ಪ್ರಜ್ವಲ್ ರೇವಣ್ಣ ಎಂದ ಮಾತ್ರಕ್ಕೆ ಕಾನೂನು ಬದಲಿಸಲಾಗದು ಎಂದು ಗುರುವಾರ ಮೌಖಿಕವಾಗಿ ಹೇಳಿದೆ.

ಪ್ರಜ್ವಲ್ ಕಾರು ಚಾಲಕನ ಸ್ಯಾಮ್ಸಂಗ್ ಫೋನ್‌ನಿಂದ ಪಡೆದಿರುವ ಫೋಟೊ ಮತ್ತು ಎಲ್ಲಾ ವಿಡಿಯೊಗಳನ್ನು ಒದಗಿಸಲು ಪ್ರಾಸಿಕ್ಯೂಷನ್‌ಗೆ ನಿರ್ದೇಶಿಸಬೇಕು ಎಂದು ಕೋರಿ ಪ್ರಜ್ವಲ್ ರೇವಣ್ಣ ಸಿಆರ್‌ಪಿಸಿ ಸೆಕ್ಷನ್ 207ರ ಅಡಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಇತ್ಯರ್ಥಪಡಿಸಿತು.



(ಪ್ರಕರಣಕ್ಕೆ ಸಂಬಂಧಿಸಿದ ವಿಡಿಯೊ, ಚಿತ್ರಗಳು) ಇಲ್ಲಿ ಎಲ್ಲವೂ ಅಶ್ಲೀಲವಾಗಿದೆ. ಅಶ್ಲೀಲಕ್ಕೂ ಒಂದು ಮಿತಿ ಇರಬೇಕು. ಇದು ಎಲ್ಲವನ್ನೂ ಮೀರಿದೆ. ಈ ಚಿತ್ರಗಳನ್ನು ಯಾರು ಸೆರೆಹಿಡಿಯಲು ಸಾಧ್ಯ? ಎಂದು ಪ್ರಜ್ವಲ್ ಪರ ವಕೀಲ ಜಿ. ಅರುಣ್ ಅವರನ್ನು ನ್ಯಾಯಾಲಯವು ವಿಚಾರಣೆಯ ವೇಳೆ ಪ್ರಶ್ನಿಸಿತು. ಸುಪ್ರೀಂ ಕೋರ್ಟ್ ಗೋಪಾಲಕೃಷ್ಣ ಪ್ರಕರಣದಲ್ಲಿ ನೀಡಿರುವ ತೀರ್ಪಿನ ಪ್ರಕಾರ ಹಾಲಿ ಪ್ರಕರಣಕ್ಕೆ ಅಗತ್ಯವಾದ ವಿಡಿಯೊ, ಚಿತ್ರಗಳನ್ನು ಪ್ರಾಸಿಕ್ಯೂಷನ್ ಒದಗಿಸಲಿದೆ. ಇದನ್ನು ಹೊರತುಪಡಿಸಿ ಬೇರೆ ಮಹಿಳೆಯರ ಖಾಸಗಿತನಕ್ಕೆ ಧಕ್ಕೆಯಾಗುವ ವಿಡಿಯೊ, ಚಿತ್ರಗಳನ್ನು ನೀಡಲಾಗದು. ನೀವು ಏನೋ ಮಾಡಬೇಕು ಎಂಬುದಕ್ಕೆ ಬೇರೊಬ್ಬ ಮಹಿಳೆಯ ಖಾಸಗಿತನದ ಉಲ್ಲಂಘನೆಯಾಗುವುದಕ್ಕೆ ಅವಕಾಶ ನೀಡಲಾಗದು ಎಂದು ನ್ಯಾಯಾಲಯ ಹೇಳಿತು.

ಇತರ ಮಹಿಳೆಯರ ವಿಡಿಯೊ ಒದಗಿಸಲಾಗದು: ಅರ್ಜಿದಾರರು ಕೋರುತ್ತಿರುವ ದಾಖಲೆಗಳನ್ನು ಪ್ರಾಸಿಕ್ಯೂಷನ್ ಆಧರಿಸುತ್ತಿಲ್ಲ. ಸಂತ್ರಸ್ತೆಯ ಚಿತ್ರಗಳು ಮತ್ತು ಹೇಳಿಕೆ ಹೊರತುಪಡಿಸಿ ಬೇರೆ ಯಾವುದನ್ನೂ ಪ್ರಾಸಿಕ್ಯೂಷನ್ ಆಧರಿಸುವುದಿಲ್ಲ. ಇನ್ನು ಗೋಪಾಲಕೃಷ್ಣ ಪ್ರಕರಣದ ತೀರ್ಪಿನ ಪ್ರಕಾರ ಅರ್ಜಿದಾರರಿಗೆ ಒದಗಿಸಿರುವ ವಿಡಿಯೊ, ಚಿತ್ರಗಳನ್ನು ಪರಿಶೀಲನೆ ನಡೆಸಲು ಅನುಮತಿಸಲಾಗುವುದು. ಇತರೆ ಮಹಿಳೆಯರಿಗೆ ಸಂಬಂಧಿಸಿದ ವಿಡಿಯೊ, ಚಿತ್ರಗಳನ್ನು ನೀಡಲು ಪ್ರಾಸಿಕ್ಯೂಷನ್‌ಗೆ ಆದೇಶಿಸಲಾಗದು. ಬೇರೆಯವರ ಖಾಸಗಿತನ ಉಲ್ಲಂಘಿಸುವ ಚಿತ್ರಗಳು ನಿಮಗೇಕೆ ಎಂದು ಕಟುವಾಗಿ ನ್ಯಾಯಾಲಯ ಪ್ರಶ್ನಿಸಿತು.

ಅರ್ಜಿದಾರರ ಪರವಾಗಿ ವಾದಿಸಿದ ವಕೀಲ ಜಿ ಅರುಣ್ ಅವರು ನಾನು ಯಾವುದೇ ಅಶ್ಲೀಲ ಚಿತ್ರಗಳನ್ನು ಒದಗಿಸಿ ಎಂದು ಕೋರಿಲ್ಲ. ಪ್ರಾಸಿಕ್ಯೂಷನ್ ಎಫ್‌ಎಸ್‌ಎಲ್ ವರದಿಯಲ್ಲಿ ಎಷ್ಟು ಅಶ್ಲೀಲ ಚಿತ್ರಗಳಿವೆ ಎಂದು ಉಲ್ಲೇಖಿಸಿಲ್ಲ. 2024ರ ಏಪ್ರಿಲ್ 30ರ ಮಹಜರ್ ಸಂದರ್ಭದಲ್ಲಿ ಮಾಜಿ ಕಾರು ಚಾಲಕನ ಫೋನ್ ಮತ್ತು ಸಿಮ್ ಜಪ್ತಿಮಾಡಲಾಗಿದೆ ಎಂದರು.

ಹೆಚ್ಚುವರಿ ರಾಜ್ಯ ಸರಕಾರಿ ಅಭಿಯೋಜಕ ಬಿ.ಎನ್.ಜಗದೀಶ್ ಅವರು ನ್ಯಾಯಾಲಯ ನಿರ್ದೇಶಿಸಿದರೆ ಕ್ಲೋನ್ ಮಾಡಿರುವ ಎಲ್ಲಾ ದಾಖಲೆಗಳನ್ನು ಒದಗಿಸಲಾಗುವುದು. ಆದರೆ, ಬೇರೆ ಮಹಿಳೆಯರ ಖಾಸಗಿತನಕ್ಕೆ ಧಕ್ಕೆಯಾಗುತ್ತದೆ. ವಿಚಾರಣಾಧೀನ ನ್ಯಾಯಾಲಯದಲ್ಲಿ ಪ್ರಕರಣದ ವಿಚಾರಣೆ ವಿಳಂಬಿಸಲು ಇಂಥ ಅರ್ಜಿಗಳನ್ನು ಸಲ್ಲಿಕೆ ಮಾಡಲಾಗುತ್ತಿದೆ ಎಂದು ಆಕ್ಷೇಪಿಸಿದರು. ವಾದ-ಪ್ರತಿವಾದ ಆಲಿಸಿದ ಪೀಠವು ಹಾಲಿ ಸಲ್ಲಿಕೆ ಮಾಡಿರುವ ಅರ್ಜಿಗೂ, ಇದಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಅರ್ಜಿ ಇತ್ಯರ್ಥಪಡಿಸಿತು.

ನಮಗೆ ಪೂರ್ಣ ಪ್ರಮಾಣದ ಅಧ್ಯಕ್ಷರು ಬೇಕು

ಬೆಂಗಳೂರು: ರಾಜ್ಯ ಕಾಂಗ್ರೆಸ್‌ಗೆ ಪೂರ್ಣ ಪ್ರಮಾಣದ ಅಧ್ಯಕ್ಷರ ಅಗತ್ಯವಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ಅಭಿಪ್ರಾಯಪಟ್ಟರು.

ಕೆಪಿಸಿಸಿಗೆ ಹೊಸ ಅಧ್ಯಕ್ಷರ ನೇಮಕಕ್ಕೆ ಸತೀಶ್ ಜಾರಕಿಹೊಳಿ ಹೇಳಿಕೆ ಬೆನ್ನಲ್ಲೇ ಇದೀಗ ಕೆಎನ್ ರಾಜಣ್ಣ ಕೂಡ ಹೇಳಿಕೆ ನೀಡಿದ್ದು, ಈ ವಿಚಾರದಲ್ಲಿ ಹೈಕಮಾಂಡ್ ನಾಯಕರೇ ಗೊಂದಲವನ್ನುಂಟು ಮಾಡಿದ್ದು, ಅವರೇ ಶೀಘ್ರದಲ್ಲೇ ಗೊಂದಲ ನಿವಾರಿಸಲಿ ಎಂದಿದ್ದಾರೆ.

ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕಸಭಾ ಚುನಾವಣೆ ಆದಮೇಲೆ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಮಾಡುವುದಾಗಿ ಹೈಕಮಾಂಡ್ ಹೇಳಿತ್ತು. ಲೋಕಸಭಾ ಚುನಾವಣೆ ನಡೆದು 6 ತಿಂಗಳು ಕಳೆದಿದೆ. ವಿಧಾನಸಭಾ ಚುನಾವಣೆವರೆಗೂ ಡಿ.ಕೆ. ಶಿವಕುಮಾರ ಅವರೇ, ಪೂರ್ಣ ಪ್ರಮಾಣದ ಅಧ್ಯಕ್ಷರಾಗಿ ಮುಂದುವರಿಯಲಿ. ಆದರೆ, ಈ ಬಗ್ಗೆ ಸ್ಪಷ್ಟವಾಗಿ ಹೈ ಕಮಾಂಡ್ ತಿಳಿಸಬೇಕು ಎಂದು ಮನವಿ ಮಾಡಿದರು.

ತಪ್ಪು ಹುಡುಕಬಾರದು: ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಕುರಿತು ಸತೀಶ್ ಜಾರಕಿಹೊಳಿ ಆಗ್ರಹಿಸಿದ್ದರ ಕುರಿತು ಪ್ರತಿಕ್ರಿಯಿಸಿ, ಜಾರಕಿಹೊಳಿ ಅವರು ನಮ್ಮ ಪಕ್ಷದ ಹಿರಿಯ ಪ್ರಭಾವಿ ನಾಯಕರು. ಅವರು ಹೇಳಿದ್ದರಲ್ಲಿ ತಪ್ಪು ಹುಡುಕಬಾರದು. ಒಂದು ವೇಳೆ ಸತೀಶ್ ಜಾರಕಿಹೊಳಿಗೆ ಅಧ್ಯಕ್ಷರಾದರೆ, ಸಂತೋಷ ಪಡುವವರಲ್ಲಿ ನಾನು ಮೊದಲಿಗ. ಅವರು ಜನಪರ ಕೆಲಸ ಮಾಡಿದ್ದಾರೆ. ಎಲ್ಲರಿಗೂ ಸಿಗುತ್ತಾರೆ. ಎಲ್ಲರಿಗೂ ಗೌರವ ಕೊಡ್ತಾರೆ ಎಂದರು.

ಕೆಪಿಎಸ್‌ಸಿ ಪರೀಕ್ಷೆ ವಿಚಾರದಲ್ಲಿ ಹುಡುಗಾಟ ಬೇಡ: ವಿಜಯೇಂದ್ರ

ಕೆಪಿಎಸ್‌ಸಿ ವಿದ್ಯಾರ್ಥಿಗಳ ಪ್ರತಿಭಟನಾ ಸ್ಥಳಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಪರಿಷತ್ ಪ್ರತಿಪಕ್ಷನಾಯಕ ಛಲವಾದಿ ನಾರಾಯಣಸ್ವಾಮಿ ಭೇಟಿ ನೀಡಿ ಬೆಂಬಲ ನೀಡಿದರು.

ಬೆಂಗಳೂರು: ಕೆಪಿಎಸ್‌ಸಿ ಪರೀಕ್ಷೆ ವಿಚಾರದಲ್ಲಿ ಹುಡುಗಾಟಿಕೆ ಸರಿಯಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ಫ್ರೀಡಂ ಪಾರ್ಕ್‌ನಲ್ಲಿ ನಡೆಯುತ್ತಿರುವ ಕೆಪಿಎಸ್‌ಸಿ ವಿದ್ಯಾರ್ಥಿಗಳ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ, ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯ ಸರಕಾರಕ್ಕೆ ಬುದ್ಧಿ ಹೇಳುವ ದೃಷ್ಟಿಯಿಂದ ಹೋರಾಟಕ್ಕೆ ಬೆಂಬಲ ನೀಡಿದ್ದಾಗಿ ತಿಳಿಸಿದರು.

ರಾಜ್ಯ ವಿದ್ಯಾರ್ಥಿಗಳ ಒಕ್ಕೂಟದಿಂದ ಕೆಪಿಎಸ್‌ಸಿಯಿಂದ ಉದ್ಭವಿಸುತ್ತಿರುವ ಸಮಸ್ಯೆಗಳನ್ನು ಖಂಡಿಸಿ ಹೋರಾಟ ನಿರತರಾಗಿದ್ದಾರೆ. ಪದೇಪದೇ ಪರೀಕ್ಷೆ ಮುಂದೂಡುವುದು, ಪ್ರಶ್ನೆಪತ್ರಿಕೆಗಳ ಸೋರಿಕೆ, ಪ್ರಶ್ನೆಪತ್ರಿಕೆಗಳನ್ನು ಇಂಗ್ಲಿಷ್‌ನಿಂದ ಕನ್ನಡಕ್ಕೆ ಅನುವಾದ ಮಾಡುವಾಗ ಆಗುತ್ತಿರುವ ಸಮಸ್ಯೆಗಳ ವಿರುದ್ಧ ಸಮಸ್ತಾರು ವಿದ್ಯಾರ್ಥಿಗಳು ಹೋರಾಟ ಮಾಡುತ್ತಿದ್ದಾರೆ. ರಾಜ್ಯ ಸರಕಾರದ ವಿರುದ್ಧ ಹೋರಾಟ ನಡೆಯುತ್ತಿದೆ ಎಂದು ವಿವರಿಸಿದರು.

ನಾನು, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ಯುವ ಮೋರ್ಚಾ ರಾಜ್ಯಾಧ್ಯಕ್ಷ ಮತ್ತು ಶಾಸಕ ಧೀರಜ್ ಮುನಿರಾಜು, ಜಿಲ್ಲಾ ಅಧ್ಯಕ್ಷ ಸಪ್ತಗಿರಿ ಗೌಡ ಮೊದಲಾದ ಮುಖಂಡರು ಇಲ್ಲಿಗೆ ಬಂದಿದ್ದು, ಹೋರಾಟಕ್ಕೆ ಬೆಂಬಲ ನೀಡಿದ್ದೇವೆ ಎಂದು ತಿಳಿಸಿದರು. ಈ ಬೆಂಬಲ ಸಾಂಕೇತಿಕವಲ್ಲ. ರಾಜ್ಯ ಸರಕಾರ ಈ ವಿಷಯ ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು.

ಪಗಡೆ ಆಟವಾಗಿ ಪರಿಗಣಿಸಿದ ಸಿಎಂ: ಜಾತಿ ಜನಗಣತಿಯನ್ನು ಮುಖ್ಯಮಂತ್ರಿಯವರು ಪಗಡೆ ಆಟ ಎಂದು ಪರಿಗಣಿಸಿದಂತಿದೆ. ಯಾವಾಗ ಅವರ ಸಿಎಂ ಕುರ್ಚಿ ಅಲ್ಲಾಡುತ್ತದೋ ಅವಾಗ ಜಾತಿ ಜನಗಣತಿ ಅನುಷ್ಠಾನಕ್ಕೆ ತರುವುದಾಗಿ ಹೇಳುತ್ತಾರೆ. ಕುರ್ಚಿ ಭದ್ರವಾಗುವ ಹಾಗಿದ್ದಾಗ ಅದನ್ನು ಮುಂದೂಡುವುದಾಗಿ ಹೇಳುತ್ತಾರೆ. ಸಿದ್ದರಾಮಯ್ಯನವರ ನೇತೃತ್ವದ ರಾಜ್ಯದ ಕಾಂಗ್ರೆಸ್ ಸರಕಾರವು ಒಂದೆಡೆ ಜಾತಿಗಳ ನಡುವೆ ವಿಷಬೀಜ ಬಿತ್ತುತ್ತಿದೆ. ಜಾತಿ ಜನಗಣತಿ ವಿಚಾರದಲ್ಲಿ ಹುಚ್ಚಾಟ ಮಾಡುವುದು ಅಕ್ಷಮ್ಯ ಅಪರಾಧ. ಮುಖ್ಯಮಂತ್ರಿಯ ಸ್ಥಾನದಲ್ಲಿ ಕುಳಿತವರು ಈ ರೀತಿ ಹುಡುಗಾಟಿಕೆ ಮಾಡುವುದು ಅಕ್ಷಮ್ಯ ಅಪರಾಧ ಎಂದರು.

IN THE COURT OF THE LXXV ADDL CITY CIVIL & SESSIONS JUDGE, AT BENGALURU (CCH-76)
Ex. No.3014/2023
IN O.S.No.2122/2019
DECREE HOLDER: SMT. SARASWATHI
W/o. Sri S.G.Gopal, Aged about 60 years, R/at No. 31, 2nd Main Road, Near Kaveri Apartment, SVG Nagar, Mudalapalya, Bengaluru-560 072. ....V/S.......
JUDGEMENT DEBTORS:
SRI MUNIYAPPA & OTHERS
NOTICE TO THE JUDGMENT DEBTORS No.1(a) and 4
1(a) SRI VENKATESH, S/o Late Muniyappa, Aged about 40 years, Residing at No.181, Thimmappanapalya, Srigandadakaval, Vishwaneedam Post, Bengaluru-560 091.
4. SRI RAMAKRISHNAPPA,
S/o. Late Venkatappa, Aged about 68 Years, All are Residing at No.181, Thimmappanapalya, Srigandadakaval, Vishwaneedam Post, Bengaluru.
WHEREAS, the above named Decree Holder in Execution No.3014/2023 on the file of LXXV Additional City Civil & Sessions Judge, City Civil Court [CCH-76], Bengaluru has instituted the above execution petition against the Judgment Debtors for execution of the decree passed in said suit on 21.08.2023 i.e., to delivery vacant possession of the Suit Schedule Property to the Decree Holders.
Therefore, you the Judgment Debtors are hereby warned to appear in person or through pleader duly instructed before the LXXV additional Civil & Sessions Judge, City Civil Court [CCH-76], **Bengaluru on 21.02.2025 at 11 A.M,** failing which the execution petition will be heard and determined as ex-parte.
SCHEDULE PROPERTY
All that piece and parcel of the vacant residential site bearing No.887 BBMP khatha No.282/25/3-887 carved out of land bearing Sy.No.25/3 formed by the Karnataka State 'D' Group Employees Central Association measuring East to West 50 feet, North to South 24 feet, in all totally measuring 1,200 square feet situated at Karnataka State 'D' Group Employees Central Association Layout, Srigandadhakaval Village, Yeswanthpura Hobli, Bengaluru North Taluk, now coming within the jurisdiction of BBMP and bounded on; **East By :** Road, **West by** : Site No.881, **North by :** Site No.888, **South by** : O.H.Tank(overhead tank)
Given under my hand and seal and signature on this day of **15.01.2025 at Bengaluru.**
By order of the Court, Assistant Registrar City Civil Court, Bangalore
Advocate for Decree Holder
J.S.DINESH , Advocate
No 74, "Mathrushree" City Civil Court 12th E Main Road, 76th Cross, 6th Block, Rajajinagara, Bengaluru-560 010.

ಮಾನ್ಯ 2ನೇ ಅಪರ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕನಕಪುರ
ಸಿ.ಮಿಸ್.ನಂ. 619/2024
ಅರ್ಜಿದಾರರು: 1. ಶ್ರೀಮತಿ ಕಾಳಮ್ಮ ಕೋಂ ಲೇಟ್ ಅಣ್ಣಯ್ಯ 2. ಶ್ರೀ ಅರಸೇಗೌಡ ಬಿನ್ ಲೇಟ್ ಲಿಂಗೇಗೌಡ 3. ಶ್ರೀ ಎಸ್.ಎಂ.ಚಿಕ್ಕರಾಜ ಬಿನ್ ಲೇಟ್ ಕುಳ್ಳಪ್ಪ ಮತ್ತು ಮರಿಯಪ್ಪ 4. ಶ್ರೀ ಚಿಕ್ಕದೊಳ್ಳೇಗೌಡ ಬಿನ್ ಲೇಟ್ ಲಿಂಗೇಗೌಡ 5. ಶ್ರೀ ಸಿದ್ದರಾಮಯ್ಯ ಬಿನ್ ಲೇಟ್ ಲಿಂಗೇಗೌಡ 6. ಶ್ರೀ ರಮೇಶಯ್ಯ ಬಿನ್ ಲೇಟ್ ಲಿಂಗೇಗೌಡ
[illegible]
ದಿನಾಂಕ 16/01/2025 ರಂದು ನನ್ನ ಸ್ವಹಸ್ತಾಕ್ಷರ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ನೀಡಲಾಗಿದೆ.
ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೆದಾರರು,
ಮಾನ್ಯ 2ನೇ ಅಪರ ಸಿವಿಲ್ ನ್ಯಾಯಾಧೀಶರು ನ್ಯಾಯಾಲಯ, ಮತ್ತು ಜೆ.ಎಂ.ಎಫ್.ಸಿ. ಕನಕಪುರ
ಅರ್ಜಿದಾರರ ಪರ ವಕೀಲರು
ವಿ.ದೊಡ್ಡವೀರೇಗೌಡ, ವಕೀಲರು, ವೀರಭದ್ರೇಶ್ವರ ನಿಲಯ, ಬಿ.ಡಬ್ಲ್ಯೂ.ಎಸ್.ಎಸ್.ಬಿ ಪೈಪ್ ಲೈನ್ ಇಸ್ಟ್
ಸ್ಥಳ : ಕನಕಪುರ

ಮಾಜಿ ಶಾಸಕ ಎಂ. ಶ್ರೀನಿವಾಸ್ ನಿಧನ

ಬೆಂಗಳೂರು: ಕಳೆದ ಹಲವು ದಿನಗಳಿಂದ ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದ ಮಾಜಿ ಸಂಸದ ಹಾಗೂ ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಎಂ.ಶ್ರೀನಿವಾಸ್ ನಿಧನರಾಗಿದ್ದಾರೆ.

ಮೃತರು ಪತ್ನಿ, ಪುತ್ರ ವೆಂಕಟೇಶ್, ಪುತ್ರಿಯರು, ಸಹೋದರ ಹಾಗೂ ಬೆಂಗಳೂರು ದಕ್ಷಿಣ ಕ್ಷೇತ್ರದ ಶಾಸಕ ಎಂ. ಕೃಷ್ಣಪ್ಪ ಸೇರಿದಂತೆ ಅಪಾರ ಸಂಖ್ಯೆಯ ಅಭಿಮಾನಿಗಳು, ಹಿತೈಷಿಗಳನ್ನು ಅಗಲಿದ್ದಾರೆ. ಕಳೆದ ಹಲವು ದಿನಗಳಿಂದ ವಯೋಸಹಜ ಸಮಸ್ಯೆಗಳಿಂದ ಬಳಲುತ್ತಿದ್ದ ಶ್ರೀನಿವಾಸ್ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದರೆಂದು ಕುಟುಂಬದ ಮೂಲಗಳು ತಿಳಿಸಿವೆ. ಆಸ್ಪತ್ರೆಯಿಂದ ಜಯನಗರದ 7ನೇ ಬ್ಲಾಕ್‌ನಲ್ಲಿರುವ ಅವರ ನಿವಾಸದಲ್ಲಿ ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನದವರೆಗೆ ಅಂತಿಮ ದರ್ಶನಕ್ಕೆ ಇಡಲಾಗಿತ್ತು. ಮೃತರ ಅಂತ್ಯಕ್ರಿಯೆ ಒಕ್ಕಲಿಗ ಸಂಪ್ರದಾಯದಂತೆ ಶುಕ್ರವಾರ ಉತ್ತರಹಳ್ಳಿಯಲ್ಲಿ ನಡೆಯಲಿದೆ. ಬೆಳಗ್ಗೆಯಿಂದ ಮಧ್ಯಾಹ್ನ 3 ಗಂಟೆವರೆಗೆ ಉತ್ತರಹಳ್ಳಿ ಸರ್ಕಲ್‌ನಲ್ಲಿರುವ ಆರ್‌ಎಂಎಸ್ ಶಾಲೆಯಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗುತ್ತದೆ.

ಮಾಜಿ ಸಂಸದ ಎಂ.ಶ್ರೀನಿವಾಸ್ ನಿಧನಕ್ಕೆ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಸಂತಾಪ ಸೂಚಿಸಿದ್ದಾರೆ.

23 ಕೋಟಿ ರುಪಾಯಿ ಮೌಲ್ಯದ ಗಾಂಜಾ ವಶ

ಬೆಂಗಳೂರು: ಕೆಂಪೇಗೌಡ ವಿಮಾನ ನಿಲ್ದಾಣದಲ್ಲಿ ಅಕ್ರಮವಾಗಿ ತಂದಿದ್ದ 23 ಕೋಟಿ ರು. ಮೌಲ್ಯದ ಗಾಂಜಾವನ್ನು ಕಸ್ಟಮ್ಸ್ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ. ಬ್ಯಾಂಕಾಕ್‌ನಿಂದ ಅಕ್ರಮವಾಗಿ 23 ಕೆಜಿ ಗಾಂಜಾ ತಂದಿದ್ದ ಮೂವರನ್ನು ಬಂಧಿಸಲಾಗಿದೆ. ಬಂಧಿತ ಮೂವರು ಬ್ಯಾಂಕಾಕ್‌ನಿಂದ ಅಕ್ರಮವಾಗಿ 23 ಕೆಜಿಯ ಹೈಡ್ರೋಪೋನಿಕ್ಸ್, ಮೈರವಾನ್ ಮತ್ತು ಹೂ ಸೇರಿ ವಿವಿಧ ಬಗೆಯ ಗಾಂಜಾವನ್ನು ಪ್ರತ್ಯೇಕ ಕವರ್‌ಗಳಲ್ಲಿ ಪ್ಯಾಕಿಂಗ್ ಮಾಡಿಕೊಂಡು ಲಗೇಜ್ ಬ್ಯಾಗ್‌ನಲ್ಲಿಟ್ಟುಕೊಂಡು ಕೆಐಎಬಿಗೆ ಬಂದಿದ್ದರು. ಈ ವೇಳೆ ವಿಮಾನ ನಿಲ್ದಾಣದ ಕಸ್ಟಮ್ಸ್ ಅಧಿಕಾರಿಗಳು ಪರಿಶೀಲನೆ ವೇಳೆ ಮೂವರನ್ನು ಬಂಧಿಸಿದ್ದಾರೆ.

ಎ ಕಿಡ್ಜ್ ಪ್ರೀ ಸ್ಕೂಲ್‌ನಲ್ಲಿ ಸಂಕ್ರಾಂತಿ ಸಂಭ್ರಮ

ನಗರದ ಅತ್ತಿಬೆಲೆ ಎ ಕಿಡ್ಜ್ ಫ್ರೀ ಸ್ಕೂಲ್ ನಲ್ಲಿ ಸಂಕ್ರಾಂತಿ ಹಬ್ಬ ಆಚರಣೆ ವೇಳೆ ಮಕ್ಕಳಿಗೆ ರೈತ ಸಮುದಾಯ ಬಳಸುವ ಕೃಷಿ ವಸ್ತುಗಳು, ಉಪಕರಣಗಳ ಪರಿಚಯ ಸಿಗಬೇಕು ಎನ್ನುವ ಉದ್ದೇಶದಿಂದ ಕೃಷಿ ಬಳಕೆಗೆ ಉಪಯೋಗಿಸುವ ವಸ್ತುಗಳನ್ನು ಪ್ರದರ್ಶಿಸಲಾಯಿತು.

ಬೆಂಗಳೂರು: ಭಾರತದ ಬೆನ್ನೆಲುಬಾಗಿರುವ ರೈತ ಸಮೂಹಕ್ಕೆ ಹರ್ಷ ತರುವ ಸುಗ್ಗಿ ಹಬ್ಬದ ಸಂಕ್ರಾಂತಿಯ ಮಹತ್ವ ನಮ್ಮ ಮುಂದಿನ ಪೀಳಿಗೆಗೆ ತಿಳಿಸಿಕೊಡುವ ಮಹತ್ವದ ಜವಾಬ್ದಾರಿ ನಮ್ಮ ಮೇಲಿದೆ ಎಂದು ಎ ಕಿಡ್ಜ್ ಫ್ರೀ ಸ್ಕೂಲ್ ಪ್ರಾಂಶುಪಾಲ ಜೆ.ಎಸ್.ಸಂತೋಷ್ ಅಭಿಪ್ರಾಯಪಟ್ಟರು.

ನಗರದ ಅತ್ತಿಬೆಲೆ ಎ ಕಿಡ್ಜ್ ಫ್ರೀ ಸ್ಕೂಲ್ ನಲ್ಲಿ ಸಂಕ್ರಾಂತಿ ಹಬ್ಬವನ್ನುಆಚರಣೆ ವೇಳೆ ಮಕ್ಕಳಿಗೆ ರೈತ ಸಮುದಾಯ ಬಳಸುವ ಕೃಷಿ ವಸ್ತುಗಳು, ಉಪಕರಣಗಳ ಪರಿಚಯ ಸಿಗಬೇಕು ಎನ್ನುವ ಉದ್ದೇಶದಿಂದ ಕೃಷಿ ಬಳಕೆಗೆ ಉಪಯೋಗಿಸುವ ವಸ್ತುಗಳನ್ನು ಪ್ರದರ್ಶಿಸಲಾಯಿತು. ಸಾಂಪ್ರದಾಯಿಕ ಉಡುಗೆ ತೊಟ್ಟ ಮಕ್ಕಳು ಸಂಭ್ರಮದಿಂದ ಹಬ್ಬದ ಆಚರಣೆ ಮಾಡಿದರು. ಈ ಸಂದರ್ಭದಲ್ಲಿ ಗೋ ಪೂಜೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿತ್ತು. ಶಾಲೆಯ ಆಡಳಿತ ಮಂಡಳಿ ಸದಸ್ಯರು ಇದ್ದರು.

ಎನ್ವಿರಾನ್ಮೆಂಟಲ್ ಕ್ಲಿಯರೆನ್ಸ್
ಕರ್ನಾಟಕ ರಾಜ್ಯಮಟಟದ ಪ್ರಧಾನ ಅಧ್ಯಯನ ಪ್ರಾಧಿಕಾರವು (ಭಾರತ ಸರ್ಕಾರದ ಪರಿಸರ ಮತ್ತು ಅರಣ್ಯ ಸಚಿವಾಲಯದಿಂದ ರಚಿಸಲ್ಪಡಲಾಗಿದೆ) ಮೆ: ಅಕರ್ಷ್ ಪ್ರಾಪರ್ಟಿ ಡೆವಲಪ್‌ಮೆಂಟ್ಸ್ ಪ್ರೈವೇಟ್ ಲಿಮಿಟೆಡ್ ಮತ್ತು ಆಕರ್ಷಕ್ ರಿಯಾಲಿಟಿ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ಅವರಿಗೆ ತಮ್ಮ ಪತ್ರ ಸಂಖ್ಯೆ No.SEIAA:149 CON:2024 ದಿನಾಂಕ: 15.01.2025 ಮೂಲಕ ಬೆಂಗಳೂರು ಜಿಲ್ಲೆ, ಬೆಂಗಳೂರು ಆನೇಕಲ್ ತಾಲ್ಲೂಕು, ಸರ್ಜಾಪುರ ಹೋಬಳಿ, ಘಟ್ಟಹಳ್ಳಿ ಗ್ರಾಮದ, ಸರ್ವೆ ನಂಬರ್ 97P, 98P, 99/2, 100/1P, 100/2, 100/3, 101/1P, 101/2P, 101/3P, 104P, 105/1P, 106P, 129/1P, 130/1, 130/2, 177/1, 177/3, 178, 179/2, 181/1, 181/2, 182/1 ಮತ್ತು 185 ರಲ್ಲಿ ವಸತಿ ಯೋಜನೆಗೆ ಪರಿಸರ ಅನುಮೋದನೆ ನೀಡಿದೆ. ಅನುಮತಿ ಪತ್ರದ ಪ್ರತಿಯು MoEFCC/SEIAA ಕರ್ನಾಟಕ ವೆಬ್ ಸ್ಶೈಟ್ **http://parivesh.nic.in. http://envrionmentclearance.nic.in. http://seiaa.karnataka.gov.in** ನಲ್ಲೂ ಲಭ್ಯವಿದೆ. ಈ ಮೇಲಿನ ಪರಿಸರ ನಿರಾಕ್ಷೇಪಣಾ ಪತ್ರ ನಿಗದಿಸಿದ ಷರತ್ತಿಗೆ ಬದ್ಧವಾಗಿ ಈ ಸಾರ್ವಜನಿಕ ಪ್ರಕಟಣೆಯನ್ನು ನೀಡಲಾಗಿದೆ.

ಇಂದು, ನಾಳೆ ಸಚಿವಾಲಯ ಸಿಬ್ಬಂದಿಗಾಗಿ ಇವಿ ಮೇಳ

ಬೆಂಗಳೂರು: ಬೆಸ್ಕಾಂ ಹಾಗೂ ಸಚಿವಾಲಯ ನೌಕರರ ಸಂಘದ ಸಂಯುಕ್ತಾಶ್ರಯದಲ್ಲಿ ಎಲೆಕ್ಟ್ರಿಕ್ ವಾಹನಗಳ ಬಳಕೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಸಚಿವಾಲಯದ ಅಧಿಕಾರಿಗಳು ಹಾಗೂ ಸಿಬ್ಬಂದಿಗಾಗಿ ಜ.17 ಹಾಗೂ 18 ರಂದು ವಿಧಾನಸೌಧದ ಆವರಣದಲ್ಲಿ ವಿಶೇಷ ಇವಿ ಮೇಳ ಆಯೋಜಿಸಲಾಗಿದೆ ಎಂದು ಬೆಸ್ಕಾಂನ ವ್ಯವಸ್ಥಾಪಕ ನಿರ್ದೇಶಕ ಮಹಾಂತೇಶ ಬೀಳಗಿ ತಿಳಿಸಿದರು.

ಸಚಿವಾಲಯದ ನೌಕರರಿಗಾಗಿಯೇ ವಿಶೇಷ ಇವಿ ಮೇಳವನ್ನು ಇಂಧನ ಸಚಿವ ಕೆ.ಜೆ. ಜಾರ್ಜ್, ಸರಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಮಾರ್ಗದರ್ಶನದಲ್ಲಿ ನಡೆಸಲಾಗುತ್ತಿದ್ದು, ಜ.17 ರಂದು ವಿಧಾನಸೌಧದ ಮೆಟ್ಟಿಲುಗಳ ಮುಂಭಾಗದಲ್ಲಿ ಇವಿ ಮೇಳ - 2025ಕ್ಕೆ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಚಾಲನೆ ನೀಡಲಿದ್ದಾರೆ ಎಂದು ಹೇಳಿದರು.

ಪ್ರತಿಷ್ಠಿತ ಇವಿ ವಾಹನ ತಯಾರಕರು ಇವಿ ಮೇಳದಲ್ಲಿ ಭಾಗವಹಿಸುತ್ತಿದ್ದು, ಸರಕಾರಿ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ವಿಶೇಷ ರಿಯಾಯಿತಿ ದರದಲ್ಲಿ ವಾಹನ ಮಾರಾಟ ಮಾಡಲಿದ್ದಾರೆ. ಸಚಿವಾಲಯದ ಸಿಬ್ಬಂದಿ ಹಾಗೂ ಅಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮೇಳದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ನಗರದ ವಾಯುಮಾಲಿನ್ಯ ಹಾಗೂ ಏರುತ್ತಿರುವ ವಾಹನಗಳ ಇಂಧನ ದರ ಹೊರೆ ತಗ್ಗಿಸಲು ಇವಿ ವಾಹನಗಳ ಬಳಕೆಯೇ ಪರಿಹಾರ.

ಎಲೆಕ್ಟ್ರಿಕ್ ವಾಹನಗಳಿಗೆ ರಸ್ತೆ ತೆರಿಗೆ ಸಹ ಇರುವುದಿಲ್ಲ. ಸಚಿವಾಲಯ ನೌಕರರಿಗೆ ಅತಿ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯವೂ ದೊರೆಯಲಿದೆ.

ಮಾನ್ಯ 3ನೇ ಅಪರ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕನಕಪುರ
ಸಿ.ಮಿಸ್.ನಂ. 831/2024
ಅರ್ಜಿದಾರರು: ಶ್ರೀ ವೆಂಕಟಯ್ಯ ಬಿನ್ ಲೇಟ್ ಚಿಕ್ಕೈದಯ್ಯ ವಯಸ್ಸು 67 ವರ್ಷ ವಾಸ: ಲಕ್ಷ್ಮಣ ಲೇಔಟ್, ಕೆರೆಬೀದಿ, ಕುರುಪೇಟೆ ಕನಕಪುರ ಟೌನ್, ಕನಕಪುರ ತಾಲ್ಲೂಕು ರಾಮನಗರ ಜಿಲ್ಲೆ ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀದಾರ್ ಕನಕಪುರ, ಕನಕಪುರ ತಾಲ್ಲೂಕು. ರಾಮನಗರ ಜಿಲ್ಲೆ ಮತ್ತು ಇನ್ನೊಬ್ಬರು.
ಪ್ರಕಟಣೆ
ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1,2,4 ಮತ್ತು 5ನೇ ಅರ್ಜಿದಾರರ ಸಹೋದರಿ ಮತ್ತು 3ನೇ ಅರ್ಜಿದಾರರ ಅತ್ತಿಗೆಯವರಾದ ಜಯಲಕ್ಷ್ಮಮ್ಮ ಬಿನ್ ಲೇಟ್ ಚಿಕ್ಕಹೈದಯ್ಯ ರವರು ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಕಸಬಾ ಹೋಬಳಿ, ಕುರುಬರಹಳ್ಳಿ ಗ್ರಾಮದಲ್ಲಿ ದಿನಾಂಕ 01.02.1990 ರಂದು ಮರಣ ಹೊಂದಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದ್ದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರ ಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ, 04.03.2025 ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರೂ ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥ ಗೊಳಿಸಲಾಗುವುದು.
2025ರ ಜನವರಿ 10ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.
ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೆದಾರರು,
ಮಾನ್ಯ 3ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ. ನ್ಯಾಯಾಲಯ, ಕನಕಪುರ
ಅರ್ಜಿದಾರರ ಪರ ವಕೀಲರು
ಮಧುಸೂದನ
ವಕೀಲರು, ಕನಕಪುರ
ಸ್ಥಳ : ಕನಕಪುರ
ದಿನಾಂಕ:

ಮಾನ್ಯ 3ನೇ ಅಪರ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕನಕಪುರ
ಸಿ.ಮಿಸ್.ನಂ. 834/2024
ಅರ್ಜಿದಾರರು: ಶ್ರೀ ವೆಂಕಟಯ್ಯ ಬಿನ್ ಲೇಟ್ ಚಿಕ್ಕೈದಯ್ಯ ವಯಸ್ಸು 67 ವರ್ಷ ವಾಸ: ಲಕ್ಷ್ಮಣ ಲೇಔಟ್, ಕೆರೆಬೀದಿ, ಕುರುಪೇಟೆ ಕನಕಪುರ ಟೌನ್, ಕನಕಪುರ ತಾಲ್ಲೂಕು ರಾಮನಗರ ಜಿಲ್ಲೆ ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀದಾರ್ ಕನಕಪುರ, ಕನಕಪುರ
[illegible]

ಮಾನ್ಯ 3ನೇ ಅಪರ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕನಕಪುರ
ಸಿ.ಮಿಸ್.ನಂ. 833/2024
ಅರ್ಜಿದಾರರು: ಶ್ರೀ ವೆಂಕಟಯ್ಯ ಬಿನ್ ಲೇಟ್ ಚಿಕ್ಕೈದಯ್ಯ ವಯಸ್ಸು 67 ವರ್ಷ ವಾಸ: ಲಕ್ಷ್ಮಣ ಲೇಔಟ್, ಕೆರೆಬೀದಿ, ಕುರುಪೇಟೆ ಕನಕಪುರ ಟೌನ್, ಕನಕಪುರ ತಾಲ್ಲೂಕು ರಾಮನಗರ ಜಿಲ್ಲೆ ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀದಾರ್ ಕನಕಪುರ, ಕನಕಪುರ
[illegible]

ಮಾನ್ಯ 3ನೇ ಅಪರ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ ಕನಕಪುರ
ಸಿ.ಮಿಸ್.ನಂ. 832/2024
ಅರ್ಜಿದಾರರು: ಶ್ರೀ ವೆಂಕಟಯ್ಯ ಬಿನ್ ಲೇಟ್ ಚಿಕ್ಕೈದಯ್ಯ ವಯಸ್ಸು 67 ವರ್ಷ ವಾಸ: ಲಕ್ಷ್ಮಣ ಲೇಔಟ್, ಕೆರೆಬೀದಿ, ಕುರುಪೇಟೆ ಕನಕಪುರ ಟೌನ್, ಕನಕಪುರ ತಾಲ್ಲೂಕು ರಾಮನಗರ ಜಿಲ್ಲೆ ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀದಾರ್ ಕನಕಪುರ, ಕನಕಪುರ
[illegible]

ಮಾನ್ಯ ಗೌರವಾನ್ವಿತ ಪ್ರಧಾನ ಕಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಕನಕಪುರ
ಸಿ.ಮಿಸ್.ನಂ. 622/2024
ಅರ್ಜಿದಾರರು: ಶ್ರೀಮತಿ ಕಮಲ ಬಿನ್ ಲೇಟ್ ಕೆ. ಎಂ.ನಾಗರಾಜು ವಯಸ್ಸು 58 ವರ್ಷ ವಾಸ: ಕೆ.ಎಸ್. ಆರ್.ಟಿ.ಸಿ ಕ್ವಾಟ್ರಸ್ ಹಿಂಭಾಗ ಕನಕಪುರ ಟೌನ್, ರಾಮನಗರ ಜಿಲ್ಲೆ ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: ಮುನಿಸಿಪಲ್ ಆಯುಕ್ತರು ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ಕನಕಪುರ ಟೌನ್,
[illegible]

ಕುಖ್ಯಾತ ರೌಡಿ ಗಣಿ ಗುಂಡಿಗೆ ಬಲಿ

ಬೆಂಗಳೂರು: ಕುಖ್ಯಾತ ರೌಡಿ ಗಣಿ ಅಲಿಯಾಸ್ ಜಲಕ್‌ನನ್ನು ಬಾಗಲೂರು ಬಳಿಯ ಅಪಾರ್ಟ್‌ಮೆಂಟ್‌ನಲ್ಲಿ ಗುಂಡು ಹಾರಿಸಿ ಕೊಲೆ ಮಾಡಿ ಶವವನ್ನು ತಮಿಳುನಾಡಿನಲ್ಲಿ ಸುಟ್ಟು ಹಾಕಿರುವ ಘಟನೆ ನಡೆದಿದೆ. ಗಣಿ ಅಲಿಯಾಸ್ ಜಲಕ್ ನನ್ನು ಎದುರಾಳಿ ರೌಡಿ ಬ್ರಿಜೇಶ್ ಎಂಬಾತ ಗುಂಡು ಹಾರಿಸಿ ಕೊಲೆ ಮಾಡಿ ಶವ ಸುಟ್ಟಿರುವುದು ತಡವಾಗಿ ಬೆಳಕಿಗೆ ಬಂದಿದೆ. ಬಾಗಲೂರಿನ ಅಪಾರ್ಟ್ ಮೆಂಟ್‌ನಲ್ಲಿ ಗಣಿ ಅಲಿಯಾಸ್ ಜಲಕ್ ನನ್ನು ರೌಡಿ ಬ್ರಿಜೇಶ್ ಕಂಟ್ರಿಮೇಟ್ ಪಿಸ್ತೂಲ್‌ನಿಂದ 2 ಸುತ್ತು ಗುಂಡು ಹಾರಿಸಿ ಕೊಲೆ ಮಾಡಿ ಸಹಚರರನ್ನು ಕರೆಸಿಕೊಂಡು ಶವ ಸಾಗಿಸಿ ತಮಿಳುನಾಡಿನ ನಿರ್ಜನ ಪ್ರದೇಶದಲ್ಲಿ ಶವ ಸುಟ್ಟುಹಾಕಿದ್ದ. ಸಂಪಿಗೆಯಳ್ಳಿಯಲ್ಲಿ ಗಣಿ ನಾಪತ್ತೆ ಪ್ರಕರಣ ದಾಖಲಾಗಿತ್ತು.

बैंक ऑफ़ बड़ौदा
Bank of Baroda
ಬ್ಯಾಂಕ್ ಆಫ್ ಬರೋಡ
ಪ್ರಾದೇಶಿಕ ಕಚೇರಿ, ಮಕಾಮ್ ಟವರ್ಸ್, ವಿವೇಕಾನಂದ ರಸ್ತೆ, ಅಶೋಕ್ ನಗರ, ಮಂಡ್ಯ
ವಾಹನ ಹರಾಜು ಮಾರಾಟ ಸೂಚನೆ
ಬ್ಯಾಂಕ್ ಆಫ್ ಬರೋಡಾಗೆ ವಾಹನಗಳನ್ನು ಹೈಪ್ರೋಥಿಕೇಟೆಡ್ ಮಾಡಲಾಗಿದೆ
ಬ್ಯಾಂಕ್ ಆಫ್ ಬರೋಡಾದ ಅಧಿಕೃತ ಅಧಿಕಾರಿಯು ಈ ಕೆಳಗಿನ ಆಸ್ತಿಗಳನ್ನು ಸ್ವಾಧೀನಪಡಿಸಿಕೊಂಡಿದ್ದು, ಸಾಲದ ಖಾತೆಯಲ್ಲಿ ಹಕ್ಕು ಬ್ಯಾಂಕಿನ ಬಾಕಿ ಮತ್ತು ಬಡ್ಡಿಯನ್ನು ಇಲ್ಲಿ ವಿವರಿಸಿದಂತೆ ಮತ್ತು ಅದೇ ಪರಿಣಾಮವಾಗಿ ಪ್ರಧಾನ ಮಾಡಲಾದ ಅಧಿಕಾರದಲ್ಲಿ ಕೆಳಗೆ ಸಹಿ ಮಾಡಲಾದ ಬಾಕಿಗಳನ್ನು ಮರುಪಾವತಿಸಲು ವಿಫಲವಾದಾಗ **"ಎಲ್ಲಿ ಹೇಗಿದೆಯೋ ಹಾಗೆ ಮತ್ತು ಎಲ್ಲಿ ಏನಿದಿಯೋ ಹಾಗೆ"** ಆಧಾರದ ಮೇಲೆ ಈ ಕೆಳಗಿನ ವಾಹನಗಳಿಗೆ 16.01.2025 ರಂದು ಇ-ಹರಾಜಿನ ಮಾರಾಟದ ಸೂಚನೆಯನ್ನು ಈ ಮೂಲಕ ಪ್ರಕಟಿಸಲಾಗಿದೆ.

ಕ್ರ. ಸಂ	ಶಾಖೆ ಮತ್ತು ಖಾತೆಯ ಹೆಸರು ವಾಹನ ಮಾಲೀಕರ ಹೆಸರು ವಿವರ	ಆಸ್ತಿಯ ವಿವರ/ವಾಹನ	ಬಾಕಿ ಮೊತ್ತ (ರೂ. ಗಳಲ್ಲಿ ಬಡ್ಡಿ ಮತ್ತು ಶುಲ್ಕಗಳನ್ನು ಹೊರತುಪಡಿಸಿ)	ಮೀಸಲು ಬೆಲೆ/ಇಎಂಡಿ ಠೇವಣಿ/ ಇಎಂಡಿ ಕನಿಷ್ಠ ಬಿಡ್ ಹೆಚ್ಚಳ ಮೊತ್ತ
1	ರಾಮನಗರ ಶಾಖೆ, ಖಾತೆ ಸಂಖ್ಯೆ: 67380600004276 ಶ್ರೀ. ದಿವಾಕರ್ ಕೆ ಬಿನ್ ಕೃಷ್ಣಪ್ಪ	MODEL : TATA PUNCH ADV 1.2 P MT BS6PH2 Bearing Registration Number-KA 42 N 9799.	ರೂ. 8,00,288/- ದಿನಾಂಕ 15.10.2024 ರಂದು ಇದ್ದಂತೆ	ರೂ.5,40,000/- ರೂ.54,000/- ರೂ.10,000/-
2	ಶ್ಯಾನುಬೋಗನಹಳ್ಳಿ ಶಾಖೆ, ಖಾತೆ ಸಂಖ್ಯೆ: 67330600001509 ಶ್ರೀ ಮುರಳಿ ಮನೋಹರ ಬಿನ್ ಗಿರಿದಾಸ	MODEL : BALENO XETA PETROL Bearing Registration Number- KA 42 N 4951.	ರೂ. 6,20,002/- ದಿನಾಂಕ 12.01.2025 ರಂದು ಇದ್ದಂತೆ	ರೂ.4,00,000/- ರೂ.40,000/- ರೂ.10,000/-

* ಇಎಂಡಿ ಮತ್ತು ಡಾಕ್ಯುಮೆಂಟ್‌ಗಳನ್ನು ಸಲ್ಲಿಸುವ ಕೊನೆಯ ದಿನಾಂಕ : 06.02.2025 ಮಧ್ಯಾಹ್ನ 2.00 ಗಂಟೆಗೆ ಮೊದಲು
* ಇ-ಹರಾಜಿನ ದಿನಾಂಕ/ಸಮಯ : 06.02.2025 ಮಧ್ಯಾಹ್ನ 02.00 ರಿಂದ ಸಂಜೆ 6.00 ರವರೆಗೆ
* ತಪಾಸಣೆ ದಿನಾಂಕ ಮತ್ತು ಸಮಯ : 17.01.2025 ರಿಂದ 05.02.2025 ಬೆಳಿಗ್ಗೆ 10.00 ರಿಂದ ಬೆಳಿಗ್ಗೆ 11.00 ರವರೆಗೆ
ಮಾರಾಟದ ನಿಯಮಗಳು ಮತ್ತು ಷರತ್ತುಗಳಿಗಾಗಿ, ದಯವಿಟ್ಟು ವೆಬ್‌ಸೈಟ್‌ನಲ್ಲಿ ಒದಗಿಸಲಾದ ಲಿಂಕ್ ಅನ್ನು ನೋಡಿ: https://www.bankofbaroda.in/e auction.htm ಮತ್ತು ಆನ್‌ಲೈನ್ ಹರಾಜು ಪೋರ್ಟಲ್: https://ebkray.in ಮತ್ತು ಅಧಿಕೃತ ಅಧಿಕಾರಿ ದೂರವಾಣಿ ಸಂಖ್ಯೆ 8445318740/9059619651 ಗೆ ಸಂಪರ್ಕಿಸಿ.
ದಿನಾಂಕ : 16.01.2025
ಸ್ಥಳ : ಮಂಡ್ಯ
ಸಹಿ/- ಅಧಿಕೃತ ಅಧಿಕಾರಿ
ಬ್ಯಾಂಕ್ ಆಫ್ ಬರೋಡ

ಸಮಾಚಾರ ಸಣ್ಣದಲ್ಲ

ಉಮಾ ಕುಲಕರ್ಣಿಗೆ ಸಾಹಿತ್ಯ ಪ್ರತಿಷ್ಠಾನ ಪ್ರಶಸ್ತಿ

ಬೆಂಗಳೂರು: ಖ್ಯಾತ ಮರಾಠಿ ಅನುವಾದಕಿ ಉಮಾ ಕುಲಕರ್ಣಿರವರಿಗೆ ಎಸ್.ಎಲ್ ಭೈರಪ್ಪ ಸಾಹಿತ್ಯ ಪ್ರತಿಷ್ಠಾನ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಭಾನುವಾರ ಬಸವನಗುಡಿ ನ್ಯಾಷನಲ್ ಕಾಲೇಜು ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಭೈರಪ್ಪನವರ ಮೇರು ಕೃತಿಗಳ ಜತೆಗೆ ಐವತ್ತೈದಕ್ಕೂ ಹೆಚ್ಚು ಕೃತಿಗಳನ್ನುಅನುವಾದ ಮಾಡಿರುವ ಉಮಾ ಕುಲಕರ್ಣಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪ್ರಶಸ್ತಿ ಪ್ರದಾನ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಎಲ್.ಭೈರಪ್ಪನವರು ವಹಿಸಲಿದ್ದಾರೆ. ಉಮಾ ಕುಲಕರ್ಣಿ ಅವರ ಸಾಹಿತ್ಯದ ಕುರಿತು ಸಹನಾ ವಿಜಯ್‌ಕುಮಾರ್, ಉಮಾ ರಾಮರಾವ್, ಅಂಜಲಿ ಜೋಷಿ ಮಾತನಾಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಜ.18ರಿಂದ ಶರಣ ಸಾಹಿತ್ಯ ಸಮ್ಮೇಳನ

ಬೆಂಗಳೂರು: ಅಖಿಲ ಭಾರತ 13ನೇ ಶರಣ ಸಾಹಿತ್ಯ ಸಮ್ಮೇಳವನ್ನು ಜ.18 ಮತ್ತು 19ರಂದು ಮುರುಘ ರಾಜೇಂದ್ರ ಬೃಹನ್ಮಠ ಚಿತ್ರದುರ್ಗದಲ್ಲಿ ಆಯೋಜಿಸಲಾಗಿದೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ತಿಳಿಸಿದೆ. ಕರ್ನಾಟಕದ ಹಲವು ಶರಣ ಮಠಗಳು ಸೇರಿ ಆಯೋಜಿಸಿರುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಿದ್ದರಾಮ ಬೆಲ್ದಾಳ ಶರಣರು ವಹಿಸಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಅತಿಥಿಗಳಾಗಿ ಹಿರಿಯ ಸಾಹಿತಿ ಡಾ.ಎಸ್.ಆರ್.ಗುಂಜಾಳ್, ಸಚಿವ ಎಂ.ಬಿ.ಪಾಟೀಲ್, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ತೋಟಗಾರಿಕಾ ಸಚಿವ ಎಸ್.ಎಸ್ ಮಲ್ಲಿಕಾರ್ಜುನ್, ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ, ಶಿವಮೊಗ್ಗ ಸಂಸದ ಬಿ.ವೈ. ರಾಘವೇಂದ್ರ, ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್ ನವೀನ್, ಮೊಳಕಾಲ್ಮೂರು ಶಾಸಕ ಎನ್.ವೈ ಗೋಪಾಲಕೃಷ್ಣ ಸೇರಿದಂತೆ ಹಲವು ರಾಜಕೀಯ ಗಣ್ಯವ್ಯಕ್ತಿಗಳು ಮತ್ತು ಶರಣ ಸಂಸ್ಥಾನ ಮಠದ ಮಠಾಧೀಶರುಗಳು ಭಾಗಿಯಾಗಲಿದ್ದಾರೆ. ಸಾಂಸ್ಕೃತಿಕ ನಾಯಕ ಬಸವಣ್ಣ, ಶರಣ ಸಾಹಿತ್ಯದಲ್ಲಿ ಮಹಿಳಾ ಸಂವೇದನೆ, ಶರಣ ಸಾಹಿತ್ಯದತ್ತ ಯುವಜನತೆ ಪ್ರಾತಃ ಸ್ಮರಣೀಯರು, ಶರಣರು ಪ್ರತಿಪಾದಿಸಿದ ಜೀವನ ಮೌಲ್ಯಗಳು, ಶರಣ ಸಾಹಿತ್ಯ ಆಧಾರಿತ ನಾಟಕಗಳು, ಆಧುನಿಕ ವಚನ ಗೋಷ್ಠಿ, ವಿಷಯಗಳ ಕುರಿತು ಚಿಂತನಾ ಗೋಷ್ಠಿ ಮತ್ತು ವಚನ ಗಮಕ ಸೌರಭ, ಸಮ್ಮೇಳನಾಧ್ಯಕ್ಷರೊಂದಿಗೆ ಸಂವಾದ, ಬಹಿರಂಗ ಅಧಿವೇಶನ ಸಮಾರೋಪ ಕಾರ್ಯಕ್ರಮಗಳು ಜರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ

ಬೆಂಗಳೂರು: ಸಂಸತ್ತಿನಲ್ಲಿ ಅಂಬೇಡ್ಕರ್‌ರಿಗೆ ಅವಮಾನ ಮಾಡಿದ ಅಮಿತ್ ಶಾ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಅಹಿಂದ ಸಂಘಟನೆ, ಸಂವಿಧಾನ ಸಂರಕ್ಷಣಾ ಮಹಾ ಒಕ್ಕೂಟದ ಜತೆಗೂಡಿ ಜ.20ರಂದು ಫ್ರೀಡಂಪಾರ್ಕ್ ನಲ್ಲಿ ಪ್ರತಿಭಟನೆ ನಡೆಸಲಿದೆ. ಅಹಿಂದ ಸಂಘಟನೆ ರೈತ ಘಟಕದ ರಾಜ್ಯಾಧ್ಯಕ್ಷ ಎ.ಎಂ.ಲಿಂಗರಾಜು ಮಾತನಾಡಿ, ಅಮಿತ್ ಶಾ ಅಂಬೇಡ್ಕರ್ ನೀಡಿದ ಸಂವಿಧಾನದಡಿ ಅಧಿಕಾರ ಪಡೆದಿದ್ದಾರೆ. ಮಹಾನಾಯಕ ಬಾಬಾ ಸಾಹೇಬರಿಗೆ ಸಂಸತ್ತಿನಲ್ಲಿ ಅವಮಾನ ಮಾಡಿದ್ದಾರೆ. ಪ್ರಧಾನ ಮಂತ್ರಿ ಮೋದಿಯವರು ಕೂಡ ಈ ಪ್ರಕರಣದ ಕುರಿತು ಒಂದು ಮಾತನಾಡಿಲ್ಲ. ಅಮಿತ್ ಶಾ ಈ ಕೂಡಲೇ ಕ್ಷಮೆಯಾಚಿಸಿ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಪ್ರತಿಭಟನೆ ನಡೆಸಲಾಗುವುದು ಎಂದರು.

ಓಂ ಶಕ್ತಿ ಭಕ್ತರಿಗೆ ಶಾಸಕ ವೀರೇಂದ್ರ ಪಪ್ಪಿ ಕಾರು ಡಿಕ್ಕಿ

ಬೆಂಗಳೂರು: ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಕಾರು ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಓಂಶಕ್ತಿ ಮಾಲಾಧಾರಿಗಳು ಗಂಭೀರ ಗಾಯಗೊಂಡಿರುವ ಘಟನೆ ಬೇಗೂರಿನಲ್ಲಿ ನಡೆದಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲೂಕಿನ ಬೇಗೂರು ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಘಟನೆ ನಡೆದಿದೆ. ಅಪಘಾತದ ದೃಶ್ಯ ಸಿಸಿ ಕ್ಯಾಮಾರದಲ್ಲಿ ಸೆರೆ ಆಗಿದೆ. ಬೆಳಿಗ್ಗೆ 9:25ರ ಸುಮಾರಿಗೆ ಒಟ್ಟು ಮೂರು ಕಾರುಗಳ ಮುಖಾಂತರ ಬೆಂಗಳೂರಿಗೆ ಬರುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ. ಘಟನೆ ಸಂಬಂಧಿಸಿದಂತೆ ನೆಲಮಂಗಲ ಸಂಚಾರಿ ಪೊಲೀಸ್ ಠಾಣೆಯಲ್ಲಿ ಚಾಲಕನ ನಿರ್ಲಕ್ಷ್ಯ, ಅಜಾಗರೂಕತೆ ಚಾಲನೆ ಆರೋಪದಡಿ ಎಫ್‌ಐಆರ್ ದಾಖಲಾಗಿದೆ. ಅಪಘಾತಕ್ಕೀಡಾದ ಕೆಎ 55, ಪಿ 0003 ಸಂಖ್ಯೆ ಬೆಂಜ್ ಕಾರನ್ನು ಜಪ್ತಿ ಮಾಡಲಾಗಿದೆ. ಮುಂದಿನ ಕಾರಿನಲ್ಲಿ ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿ ತೆರಳುತ್ತಿದ್ದರು. ಬೆಂಜ್ ಕಾರಿನಲ್ಲಿ ಪತ್ನಿ ಚೈತ್ರಾ ತೆರಳುತ್ತಿದ್ದರು. ಈ ವೇಳೆ ರಸ್ತೆ ದಾಟುತ್ತಿದ್ದ ಓಂ ಶಕ್ತಿ ಮಾಲಾಧಾರಿಗಳಿಗೆ ಬೆಂಜ್ ಕಾರು ಡಿಕ್ಕಿ ಹೊಡೆದಿದೆ. ಅಪಘಾತ ನಂತರ ವೀರೇಂದ್ರ ಪಪ್ಪಿ ಕಾರಿನಲ್ಲೇ ಪತ್ನಿ ಚೈತ್ರಾ ಬೆಂಗಳೂರಿಗೆ ತೆರಳಿದ್ದಾರೆ. ಬೆಂಜ್ ಕಾರಿನಲ್ಲೇ ಗಾಯಳುಗಳನ್ನು ಪಿಎ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದಾರೆ.

{ ಪ್ರತಾಪ್ ಸಿಂಹ } ಮಾಜಿ ಸಂಸದ

ಹಸುವಿನ ಕೆಚ್ಚಲು ಕೊಯ್ದದ್ದು ಮಾನಸಿಕ ಅಸ್ವಸ್ಥ ಅಲ್ಲ, ಹಲಾಲ್ ಕೋರ್ ಸಾಬಿ. ಸಿದ್ದರಾಮಯ್ಯರನ್ನು ಬಲವಂತದಿಂದ ಕೆಳಗೆ ಇಳಿಸಿದರೆ ಕಾಂಗ್ರೆಸ್ ಇಬ್ಭಾಗ ಮಾಡುತ್ತಾರೆ. ಇಬ್ಭಾಗವಾದ ಕಾಂಗ್ರೆಸ್‌ಗೆ ಹಸುವಿನ ಕೆಚ್ಚಲು ಕೊಯ್ಯುವ ಸಾಬಿಯ ಚಿತ್ರವನ್ನೇ ಪಕ್ಷದ ಚಿಹ್ನೆ ಮಾಡಿಕೊಳ್ಳುತ್ತಾರೆ. ಪರಮೇಶ್ವರ್ ಈ ರಾಜ್ಯದ ಅಸಹಾಯಕ ಗೃಹ ಸಚಿವ.

10 ಲಕ್ಷ ಪ್ರವಾಸಿಗರು ಭಾಗವಹಿಸುವ ನಿರೀಕ್ಷೆ | ಬೆಳಗ್ಗೆ 9 ಗಂಟೆಯಿಂದ ಸಂಜೆ 6.30 ಗಂಟೆಯವರೆಗೆ ವೀಕ್ಷಣೆಗೆ ಅವಕಾಶ

ಫಲಪುಷ್ಪ ಪ್ರದರ್ಶನಕ್ಕೆ ಅದ್ಧೂರಿ ಚಾಲನೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ತೋಟಗಾರಿಕೆ ಇಲಾಖೆಯ ವತಿಯಿಂದ ಲಾಲ್‌ಬಾಗ್‌ನ ಗಾಜಿನ ಮನೆಯಲ್ಲಿ ಆಯೋಜಿಸಲಾದ ಆದಿಕವಿ ಮಹರ್ಷಿ ವಾಲ್ಮೀಕಿ ವಿಷಯಾಧಾರಿತ ಗಣರಾಜ್ಯೋತ್ಸವದ 217ನೇ ಫಲಪುಷ್ಪ ಪ್ರದರ್ಶನವನ್ನು ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು.

ಈ ವೇಳೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ತೋಟಗಾರಿಕಾ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ವಸತಿ ಸಚಿವ ಬಿ.ಝಡ್. ಜಮೀರ್ ಅಹ್ಮದ್ ಖಾನ್, ಶಾಸಕ ಉದಯ್ ಬಿ. ಗರುಡಾಚಾರ್, ವಾಲ್ಮೀಕಿ ಗುರುಪೀಠದ ಶ್ರೀಪ್ರಸನ್ನಾನಂದಪುರಿ ಸ್ವಾಮೀಜಿ, ರೇಷ್ಮೆ ಮತ್ತು ತೋಟಗಾರಿಕಾ ಇಲಾಖೆಯ ಸರಕಾರದ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ತೋಟಗಾರಿಕಾ ನಿರ್ದೇಶಕ ರಮೇಶ್ ಡಿ.ಎಸ್. ಜಂಟಿ ನಿರ್ದೇಶಕ ಡಾ.ಎಂ.ಜಗದೀಶ್ ಮತ್ತಿತರರು ಇದ್ದರು.

ಈ ಫಲಪುಷ್ಪ ಪ್ರದರ್ಶನವನ್ನು ಜ.16ರಿಂದ 27ರವರೆಗೆ 12 ದಿನಗಳ ಕಾಲ ಆಯೋಜಿಸಲಾಗಿದ್ದು, ಬೆಳಗ್ಗೆ 9 ಗಂಟೆಯಿಂದ ಸಂಜೆ 6.30 ಗಂಟೆಯವರೆಗೆ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ. ವಯಸ್ಕರಿಗೆ ಸಾಮಾನ್ಯ ದಿನ 80 ರು.ಹಾಗೂ ರಜಾ, ವಾರಾಂತ್ಯಗಳಲ್ಲಿ 100 ರು.ನಿಗದಿಪಡಿಸಲಾಗಿದೆ. 12 ವರ್ಷದೊಳಗಿನ ಮಕ್ಕಳಿಗೆ ಎಲ್ಲಾ ದಿನ 30 ರು., ಸಮವಸ್ತ್ರ ಧರಿಸಿ ಬರುವ 1ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ರಜಾ ದಿನ ಹೊರತುಪಡಿಸಿ ಉಚಿತ ಪ್ರವೇಶವಿರುತ್ತದೆ. ಮುಂಗಡ ಬುಕ್ಕಿಂಗ್‌ಗೆ ವೆಬ್‌ಸೈಟ್ https://hasiru.karnataka.gov.in/floweshow/login.aspx ಭೇಟಿ ನೀಡಿ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಟಿಕೆಟ್ ಬುಕ್ ಮಾಡಬಹುದಾಗಿದೆ.

ಎಲ್ಲೆಲ್ಲಿ ವಾಹನಗಳ ನಿಲುಗಡೆ: ಲಾಲ್‌ಬಾಗ್‌ನಲ್ಲಿ ಆರಂಭವಾಗಿರುವ 1 ದಿನಗಳ ಪುಷ್ಪ ಪ್ರದರ್ಶನಕ್ಕೆ ಸುಮಾರು 8 ರಿಂದ 10 ಲಕ್ಷ ಪ್ರವಾಸಿಗರು ಭಾಗವಹಿಸುವ ನಿರೀಕ್ಷೆಯಿದೆ. ಸಾರ್ವಜನಿಕರ ವಾಹನಗಳ ನಿಲುಗಡೆಗೆ ಡಾ.ಮರಿಗೌಡ ರಸ್ತೆ, ಅಲ್ ಅಮೀನ್ ಕಾಲೇಜ್ ಆವರಣದಲ್ಲಿ ಅವಕಾಶ ನೀಡಲಾಗಿದೆ. ಕೆ.ಎಚ್.ರಸ್ತೆ, ಶಾಂತಿನಗರ ಬಿಎಂಟಿಸಿ ಬಸ್ ನಿಲ್ದಾಣದ ಬಳಿ ನಾಲ್ಕು ಚಕ್ರದ ವಾಹನಗಳ ನಿಲುಗಡೆಗೆ ಅವಕಾಶ ನೀಡಲಾಗಿದೆ. ಡಾ.ಮರಿಗೌಡ ರಸ್ತೆ-ಹಾಪ್ ಕಾಮ್ಸ್‌ನಲ್ಲಿ ದ್ವಿ ಚಕ್ರ ಹಾಗೂ ನಾಲ್ಕು ಚಕ್ರದ ವಾಹನಗಳನ್ನು ನಿಲುಗಡೆ ಮಾಡಬಹುದಾಗಿದೆ. ಜೆ.ಸಿ. ರಸ್ತೆ ಕಾರ್ಪೊರೇಷನ್ ಪಾರ್ಕಿಂಗ್ ಸ್ಥಳದಲ್ಲಿ ದ್ವಿ ಚಕ್ರ ಹಾಗೂ ಕಾರುಗಳ ನಿಲುಗಡೆಗೆ ಅವಕಾಶ ನೀಡಲಾಗಿದೆ ಎಂದು ಸಂಚಾರ ಪೊಲೀಸರ ಪ್ರಕಟಣೆ ತಿಳಿಸಿದೆ. ಡಾ. ಮರೀಗೌಡ ರಸ್ತೆಯಲ್ಲಿರುವ ಅಲ್-ಅಮೀನ್ ಕಾಲೇಜು ಆವರಣ (ದ್ವಿಚಕ್ರ ವಾಹನ ಗಳಿಗೆ), ಶಾಂತಿನಗರ ಬಿಎಂಟಿಸಿ ಬಹು ಮಹಡಿ ಪಾರ್ಕಿಂಗ್ ಸ್ಥಳ, ಹಾಪ್ ಕಾಮ್ಸ್ ಪಾರ್ಕಿಂಗ್ ಸ್ಥಳ ಮತ್ತು ಕಾರ್ಪೊರೇಷನ್ ಪಾರ್ಕಿಂಗ್ ಸ್ಥಳ ಸೇರಿದಂತೆ ನಿರ್ದಿಷ್ಟ ಸ್ಥಳಗಳಲ್ಲಿ ಪಾರ್ಕಿಂಗ್‌ಗೆ ಅವಕಾಶ ನೀಡಲಾಗುತ್ತದೆ. 10ನೇ ಕ್ರಾಸ್, ಡಾ. ಮರೀಗೌಡ ರಸ್ತೆ ಮತ್ತು ಲಾಲ್‌ಬಾಗ್ ರಸ್ತೆ-ಉರ್ವಶಿ ಜಂಕ್ಷನ್ ತುಂಬಾ ಜನದಟ್ಟಣೆಯಾಗಿದ್ದರೆ ಸಂಚಾರ ವನ್ನು ನಿರ್ಬಂಧಿಸಲಾಗುತ್ತದೆ ಎಂದು ಪೊಲೀಸರು ಸೂಚಿಸಿದ್ದಾರೆ.

217ನೇ ಫಲಪುಷ್ಪ ಪ್ರದರ್ಶನಕ್ಕೆ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸ್ವಾಮೀಜಿಗಳು ಸನ್ಮಾನಿಸಿದರು.

ವಾಲ್ಮೀಕಿ ವಿಷಯಾಧಾರಿತ ಗಣರಾಜ್ಯೋತ್ಸವದ 217ನೇ ಫಲಪುಷ್ಪ ಪ್ರದರ್ಶನವನ್ನು ಗುರುವಾರ ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು. ಸಚಿವರಾದ ರಾಮಲಿಂಗಾರೆಡ್ಡಿ, ಎಸ್.ಎಸ್.ಮಲ್ಲಿಕಾರ್ಜುನ, ಜಮೀರ್ ಅಹ್ಮದ್ ಖಾನ್ ಇನ್ನಿತರರು ಇದ್ದರು.

ಗಮನ ಸೆಳೆದ ಪಂಚವಟಿ.

ಎಲ್ಲೆಲ್ಲಿ ನೋ ಪಾರ್ಕಿಂಗ್?

ಲಾಲ್‌ಬಾಗ್ ಮುಖ್ಯದ್ವಾರದಿಂದ ನಿಮ್ಹಾನ್ಸ್ ವರೆಗೆ ರಸ್ತೆಯ ಎರಡೂ ಬದಿ, ಕೆ.ಎಚ್.ರಸ್ತೆ, ಕೆ.ಎಚ್.ವೃತ್ತದಿಂದ ಶಾಂತಿನಗರ ಜಂಕ್ಷನ್ ವರೆಗೆ ರಸ್ತೆಯ ಎರಡೂ ಬದಿ, ಲಾಲ್‌ಬಾಗ್ ರಸ್ತೆ, ಸುಬ್ಬಯ್ಯ ವೃತ್ತದಿಂದ ಲಾಲ್‌ಬಾಗ್ ಮುಖ್ಯದ್ವಾರದ ವರೆಗೆ ಸಿದ್ದಯ್ಯ ರಸ್ತೆ, ಊರ್ವಶಿ ಥಿಯೇಟರ್ ಜಂಕ್ಷನ್ ನಿಂದ ವಿಲ್ಸನ್ ಗಾರ್ಡನ್ 12 ನೇ ಕ್ರಾಸ್ ವರೆಗೆ, ಬಿಟಿಎಸ್ ಬಸ್ ಸ್ಟಾಪ್ ಬಿಎಂಟಿಸಿ ಜಂಕ್ಷನ್ ನಿಂದ ಪೋಸ್ಟ್ ಆಫೀಸ್ ರಸ್ತೆಯ ಎರಡೂ ಬದಿ ಹಾಗೂ ಕೃಂಬಿಗಲ್ ರಸ್ತೆಯ ಎರಡೂ ಕಡೆಗಳಲ್ಲಿ ವಾಹನ ನಿಲುಗಡೆ ನಿಷೇಧ ಹೇರಲಾಗಿದೆ. ಲಾಲ್‌ಬಾಗ್ ವೆಸ್ಟ್ ಗೇಟ್‌ನಿಂದ ಆರ್.ವಿ. ಟೀಚರ್ಸ್ ಕಾಲೇಜ್‌ವರೆಗೆ, ಆರ್.ವಿ ಟೀಚರ್ಸ್ ಕಾಲೇಜ್‌ನಿಂದ ಅಶೋಕ ಪಿಲ್ಲರ್ ವರೆಗೆ, ಅಶೋಕ ಪಿಲ್ಲರ್‌ನಿಂದ ಸಿದ್ದಾಪುರ ಜಂಕ್ಷನ್ ವರೆಗೆ ವಾಹನ ನಿಲುಗಡೆ ನಿಷೇಧ ಹೇರಲಾಗಿದೆ.

ಅಂಗವೈಕಲ್ಯತೆಯ ಸವಾಲುಗಳು ಮತ್ತು ಪರಿಹಾರಗಳ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ ಪಿಇಎಸ್ ವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಲಾಗಿತ್ತು. ಈ ವಿಚಾರ ಸಂಕಿರಣದಲ್ಲಿ ನರ– ಅರಿವಿನ ಅಂಗವೈಕಲ್ಯ, ಮಾನಸಿಕ ಅಂಗವೈಕಲ್ಯ, ಮಾತು ಮತ್ತು ಕಲಿಕೆಯಲ್ಲಿ ಅಂಗವೈಕಲ್ಯ, ದೀರ್ಘ ಕಾಲದ ಅಂಗವೈಕಲ್ಯಗಳ ಕುರಿತು ಸಂಶೋಧಕರು, ವೈದ್ಯಕೀಯ ತಜ್ಞರು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಡಾ. ಸುರೇಶ್ ಕೃಷ್ಣಮೂರ್ತಿ, ಜಯಶ್ರೀ ರಮೇಶ್, ಡಾ. ಕೆ. ಎಸ್ ಶ್ರೀಧರ್, ಡಾ. ಮಮತ ಎಚ್.ಆರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಜೈವಿಕ ಇಂಧನ ಯೋಜನೆ ಕುರಿತು ಚರ್ಚೆ

ಬೆಂಗಳೂರು: ಜೈವಿಕ ಇಂಧನ ಕಾರ್ಯಯೋಜನೆಗಳ ಉನ್ನತೀಕರಣ ಹಾಗೂ ವಾಣಿಜ್ಯೀಕರಣ ಚಟುವಟಿಕೆ ಗಳ ಕುರಿತು ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಸ್.ಈ ಸುಧೀಂದ್ರ ಕೇಂದ್ರ ಸರಕಾರದ ಕೌಶಲ್ಯಾಭಿವೃದ್ಧಿ ಸಚಿವ ಜಯಂತ್ ಚೌಧರಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು. ರಾಜ್ಯದಲ್ಲಿ ಜೈವಿಕ ಇಂಧನ ಅಭಿವೃದ್ಧಿಗೆ ಅಗತ್ಯ ವಾದ ಮಾನವಸಂಪನ್ಮೂಲ ಅಭಿವೃದ್ಧಿ ಜತೆಗೆ ಕೌಶಲ್ಯಾ ಭಿವೃದ್ಧಿ ಕೂಡ ಪ್ರಮುಖವಾಗಿದೆ. ರಾಜ್ಯದಲ್ಲಿ ಬಯೋ ಡೀಸೆಲ್, ಕಂಪ್ರೆಸ್ಡ್ ಬಯೋಗ್ಯಾಸ್, ಗ್ರೀನ್ ಐಡ್ರೋ ಜನ್ ಮುಂತಾದ ಜೈವಿಕ ಇಂಧನಗಳ ಉತ್ಪಾದನೆಗೆ ಉತ್ಪಾದನಾ ಘಟಕಗಳ ನಿರ್ಮಾಣ ಅಗತ್ಯವಾಗಿದೆ. ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಸ್ಥಾಪಿಸಿರುವ ಜೈವಿಕ ಇಂಧನ ಸಂಶೋಧನೆ ಎನ್‌ಎನ್‌ಎಬಿಎಲ್ ಅಕ್ರಿಡೇಶನ್ ಹೊಂದಿದೆ ಎಂದು ಸುಧೀಂದ್ರ ಅವರು ಕೇಂದ್ರ ಮಂತ್ರಿಗೆ ವಿವರ ನೀಡಿದರು. ರಾಜ್ಯದಲ್ಲಿ ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿ ಜತೆಗೆ ಕೌಶಲ್ಯಾಭಿವೃದ್ಧಿಗೆ ಸಜ್ಜು ಗೊಳಿಸಲು ಕೇಂದ್ರ ಸರಕಾರದಿಂದ ಸಹಕಾರ ನೀಡುವುದಾಗಿ ಮಂಡಳಿ ಅಧ್ಯಕ್ಷರಿಗೆ ಕೇಂದ್ರ ಸಚಿವರು ಭರವಸೆ ನೀಡಿದರು

ಜೈವಿಕ ಇಂಧನ ಕಾರ್ಯಯೋಜನೆಗಳ ಉನ್ನತೀಕರಣ ಹಾಗೂ ವಾಣಿಜ್ಯೀಕರಣ ಚಟುವಟಿಕೆಗಳ ಕುರಿತು ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಸ್. ಈ ಸುಧೀಂದ್ರ, ಕೇಂದ್ರ ಸರಕಾರದ ಕೌಶಲ್ಯಾಭಿವೃದ್ಧಿ ಸಚಿವ ಜಯಂತ್ ಚೌಧರಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು.

ಜ.19ಕ್ಕೆ ಭರತನಾಟ್ಯ ಗೀತನಾಟಕ

ಬೆಂಗಳೂರು: ಭರತನಾಟ್ಯ ಗೀತನಾಟಕವನ್ನು ಕೋಣನಕುಂಟೆ ಕ್ರಾಸ್ ನಲ್ಲಿರುವ ಪ್ರೆಸ್ಟೀಜ್ ಸಾಂಸ್ಕೃತಿಕ ಕೇಂದ್ರದಲ್ಲಿ ಗೋ ಬ್ರಹ್ಮಾ ಸಂಸ್ಥೆ ಭಾನುವಾರ ಆಯೋಜಿಸಿದೆ. ಶ್ರೀ ವೇಣುಗೋಪಾಲಕೃಷ್ಣ ಸ್ವಾಮಿ ದೇವಸ್ಥಾನದ ಪರಂಪರೆಯನ್ನು ನದಿ ಮತ್ತು ಮರದ ಪಿಸು ಮಾತಿನಲ್ಲಿ ಭರತ ನಾಟ್ಯ ಗೀತನಾಟಕವನ್ನು ನೂರಕ್ಕು ಹೆಚ್ಚು ಕಲಾವಿದರ ತಂಡ ಪ್ರಸ್ತುತ ಪಡಿಸುತ್ತಿದೆ. ಕಾವೇರಿ ನದಿ ಪುನಶ್ಚೇತನಕ್ಕೆ ಹಾಗೂ ಪಶ್ಚಿಮ ವಾಹಿನಿ ಕೃಷ್ಣ ದೇವಸ್ಥಾನ ಪುನರ್ ನಿರ್ಮಾಣದ ದೇಣಿಗೆ ಸಂಗ್ರಹದ ಸಲುವಾಗಿ ನೃತ್ಯ ನಾಟಕ ಆಯೋಜಿಸಲಾ ಗಿದೆ ಎಂದು ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ–9845957876.

ಆರ್‌ಎಸ್‌ಎಸ್ ಹಿರಿಯ ಮುಖಂಡ ಡಾ. ಕಲ್ಲಡ್ಕ ಪ್ರಭಾಕರ್ ಭಟ್ ಅಭಿಮತ

ಊರಿನ ಅಭಿವೃದ್ಧಿಯ ಕನಸು ಕಂಡವರು ಈಶ್ವರ ಭಟ್

ಹಿರಿಯ ನ್ಯಾಯವಾದಿ ಅರುಣ್ ಶ್ಯಾಮ್ ಅವರ ತಂದೆ ಮೈರ ಈಶ್ವರ ಭಟ್ ಅವರ ಸ್ಮರಣಾರ್ಥ ವಿಟ್ಲ ಸಮೀಪದ, ಕೊಳ್ನಾಡು ಗ್ರಾಮದ ಪಂಜಿಗದ್ದೆಯಲ್ಲಿ ನುಡಿನಮನ ಕಾರ್ಯಕ್ರಮ ನಡೆಯಿತು. ಈ ವೇಳೆ ಡಾ. ಕಲ್ಕಡ ಪ್ರಭಾಕರ ಭಟ್, ಗ್ರಾಪಂ ಮಾಜಿ ಅಧ್ಯಕ್ಷ ಕೊಳ್ನಾಡು ಸುಭಾಶ್ಚಂದ್ರ ಶೆಟ್ಟಿ ಇದ್ದರು.

ವಿಶ್ವವಾಣಿ ಸುದ್ದಿಮನೆ ಮಂಗಳೂರು

ಊರಿನ ಸರ್ವತೋಮುಖ ಅಭಿವೃದ್ಧಿಗೆ ಕನಸು ಕಂಡವರು ಈಶ್ವರ ಭಟ್ಟರು ಎಂದು ಆರ್‌ಎಸ್‌ಎಸ್ ಹಿರಿಯ ಮುಖಂಡ ಡಾ. ಕಲ್ಲಡ್ಕ ಪ್ರಭಾಕರ್ ಭಟ್ ಅಭಿಪ್ರಾಯಪಟ್ಟರು.

ಹಿರಿಯ ನ್ಯಾಯವಾದಿ ಅರುಣ್ ಶ್ಯಾಮ್ ಅವರ ತಂದೆ ಮೈರ ಈಶ್ವರ ಭಟ್ ಅವರು ಜ.4ರಂದು ನಿಧನ ಹೊಂದಿದ್ದರು. ಅವರ ಸ್ಮರಣಾರ್ಥ ವಿಟ್ಲ ಸಮೀಪದ, ಕೊಳ್ನಾಡು ಗ್ರಾಮದ ಪಂಜಿಗದ್ದೆಯಲ್ಲಿ ನುಡಿನಮನ ಕಾರ್ಯಕ್ರಮ ನಡೆಯಿತು. ಈ ವೇಳೆ ಮಾತನಾಡಿದ ಡಾ. ಕಲ್ಕಡ ಪ್ರಭಾಕರ ಭಟ್, ತಮ್ಮ ಊರಿಗೆ ಸುಮಾರು ಎರಡು ಕಿ.ಮೀ. ಉದ್ದದ ರಸ್ತೆ ನಿರ್ಮಾಣ ಮಾಡುವಲ್ಲಿ ಶ್ರಮಿಸಿದ್ದ ಅವರು, ಎಲ್ಲ ಧರ್ಮೀಯರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದರು. ಸಾವಯವ ಕೃಷಿ ಪರಿಕಲ್ಪನೆಯಲ್ಲಿ ಇಡೀ ಭೂಮಿಯನ್ನು ಬೆಳೆಸಿದರು ಎಂದರು.

ಗ್ರಾಪಂ ಮಾಜಿ ಅಧ್ಯಕ್ಷ ಕೊಳ್ನಾಡು ಸುಭಾಶ್ಚಂದ್ರ ಶೆಟ್ಟಿ ಮಾತನಾಡಿ, ಬಂಗಾರಣ್ಣ ಎಂದೇ ಹೆಸರಾಗಿದ್ದ ಮೈರ ಈಶ್ವರ ಭಟ್ ಅವರು ಜಾತಿ ಮತ ಎಂಬ ಭೇದವಿಲ್ಲದೆ ಎಲ್ಲರೊಡನೆ ಬೆರೆಯುತ್ತಿದ್ದು, ಇಲ್ಲಿನ ರಸ್ತೆ ಅಭಿವೃದ್ಧಿಯಾಗಬೇಕು, ಊರು ಬೆಳೆಯಬೇಕು ಎಂಬ ಕನಸನ್ನು ಹೊಂದಿದ್ದರು. ಅವರ ನೆನಪು ಸದಾ ಶಾಶ್ವತ ಎಂದು ಅಭಿಪ್ರಾಯಪಟ್ಟರು. ಮಾಜಿ ಶಾಸಕಿ ಟಿ. ಶಕುಂತಲಾ ಶೆಟ್ಟಿ, ಹೊರನಾಡು ಅನ್ನಪೂರ್ಣೇಶ್ವರಿ ಕ್ಷೇತ್ರದ ಧರ್ಮದರ್ಶಿ ಭೀಮೇಶ್ವರ ಜೋಶಿ, ಮಾಣಿ ಶ್ರೀರಾಮಚಂದ್ರಾಪುರ ಮಠ ಸೇವಾ ಸಮಿತಿ ಅಧ್ಯಕ್ಷ ಹಾರಕರೆ ನಾರಾಯಣ ಭಟ್ ಮಾತನಾಡಿದರು. ಮಾಧವ ಮಾವೆ, ಮುರಳಿ ಕೃಷ್ಣ ಹಸಂತಡ್ಕ, ರವೀಶ್ ಶೆಟ್ಟಿ ಕರ್ಕಳ, ಗೋಪಾಲಕೃಷ್ಣ ಹೇರಳ, ವೇ.ಮೂ.ಕೇಕಣಾಜೆ ಗಣಪತಿ ಭಟ್, ಸತೀಶ ಪಂಜಿಗದ್ದೆ, ಶ್ರೀ ರಾಮಚಂದ್ರಾಪುರ ಮಠದ ಪ್ರಶಾಸನಾಧಿಕಾರಿ ಸಂತೋಷ್ ಹೆಗಡೆ, ಸಿಎಫ್ ಒ ಗಣೇಶ್ ಜಿ. ಎಲ್., ಗುರಿಕಾರರಾದ ಶ್ರೀಧರ ಕುಕ್ಕೆಮನೆ, ನ್ಯಾಯವಾದಿ ಎಂ.ಆರ್.ಸತ್ಯನಾರಾಯಣ, ಶ್ರೀಪ್ರಕಾಶ್ ಕುಕ್ಕಿಲ, ರಾಮನಾರಾಯಣ ಜೋಶಿ, ಕುಸುಮ ಈಶ್ವರ ಭಟ್, ಮೈರ ಈಶ್ವರ ಭಟ್ಟರ ಪುತ್ರ ಹೈಕೋರ್ಟ್ ಹಿರಿಯ ನ್ಯಾಯವಾದಿ ಅರುಣಶ್ಯಾಮ ಮತ್ತಿತರರು ಉಪಸ್ಥಿತರಿದ್ದರು.

> **ಈಶ್ವರ ಭಟ್ ಅವರು ತನ್ನ ಪುತ್ರ ಹೈಕೋರ್ಟ್ ಹಿರಿಯ ನ್ಯಾಯವಾದಿ ಅರುಣಶ್ಯಾಮ ಅವರಿಗೆ ಉತ್ತಮ ಸಂಸ್ಕಾರ ನೀಡಿದ ಪರಿಣಾಮ, ಇಂದು ಸಾಮಾಜಿಕ ಬದ್ಧತೆಯ ಕಾಳಜಿಯೊಂದಿಗೆ ಕೆಲಸ ಮಾಡುವಂತಾಗಿದ್ದು, ಪುತ್ರನ ಬೆಳವಣಿಗೆಯಲ್ಲಿ ತಂದೆಯ ಕೊಡುಗೆ ಅಪಾರವಾಗಿದೆ.**
>
> **ನಳಿನ್‌ಕುಮಾರ್ ಕಟೀಲ್,**
> ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ

ಇಂದು ಸಂಗಂ ಸಾಹಿತ್ಯ ಅನುವಾದ ಉಪನ್ಯಾಸ

ಬೆಂಗಳೂರು: ಸಂಗಂ ಸಾಹಿತ್ಯ ಅನುವಾದ ವಿಷಯ ಕುರಿತು ತಿಂಗಳ ಉಪನ್ಯಾಸ ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕುವೆಂಪು ಭಾಷಾಭಾರತಿ ಪ್ರಾಧಿಕಾರ ಕಚೇರಿ ಆವರಣದಲ್ಲಿ ಶುಕ್ರವಾರ ಆಯೋಜಿಸಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಭಾಷಾಭಾರತಿ ಪ್ರಾಧಿಕಾರದ ಅಧ್ಯಕ್ಷ ಡಾ.ಚನ್ನಪ್ಪ ಕಟ್ಟಿ ವಹಿಸಿದ್ದಾರೆ. ಬೆಂಗಳೂರು ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ.ಡಿ.ಕೆ.ಚಿತ್ತಯ್ಯ ಪೂಜಾರ್‌ರಿಂದ ಪ್ರಸ್ತಾವನೆ ಹಾಗೂ ಸಂಶೋಧಕ ಡಾ.ತಮಿಳ್ ಸೆಲ್ವಿಯಿಂದ ಉಪನ್ಯಾಸ ಕಾರ್ಯಕ್ರಮ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

...ಮತ್ತೆ ಸಾಹುಕಾರ್ ದರ್ಬಾರ್

← ಮೊದಲಪುಟದಿಂದ

ಈ ಹಿಂದೆ ಆಯೋಜಿಸಿದ್ದ ಡಿನ್ನರ್ ಸಭೆ ಮುಂದೂಡಲಾಗಿದ್ದರೂ, ಮತ್ತೊಮ್ಮೆ ಸಮಯ ಕೋರುವ ಇರಾದೆಯನ್ನು ಗೃಹ ಸಚಿವ ಡಾ.ಜಿ.ಪರಮೇಶ್ವರ್ ವ್ಯಕ್ತಪಡಿಸಿದ್ದಾರೆ. ಇವೆಲ್ಲದರ ಮಧ್ಯೆ ಕೆಲ ಶಾಸಕರು ಡಿ. ಕೆ.ಶಿವಕುಮಾರ್ ಅವರನ್ನು ಬೆಂಬಲಿಸಿ ಮಾತನಾಡಿದರೆ, ಮತ್ತೆ ಹಲವರು ಸಿಎಂ ಹುದ್ದೆ / ಸಿಎಂ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಪಟ್ಟಕ್ಕೆ ಸಂಬಂಧಿಸಿದಂತೆ ಬೆಂಬಲಿಸುತ್ತಿದ್ದಾರೆ. ಮತ್ತೊಂದೆಡೆ ಬಿಜೆಪಿಯಲ್ಲಿರುವ ರಮೇಶ್ ಜಾರಕಿಹೊಳಿ ಕೂಡ ತಮ್ಮ ಸಹೋದರ ಸತೀಶ್ ರನ್ನು ಸಮರ್ಥಿಸಿಕೊಂಡು ಮೂರು ಪಕ್ಷದಲ್ಲಿ ತಮ್ಮ ಛಾಪು ಮೂಡಿಸಿ ಹೊಸ ರಾಜಕೀಯ ಲೆಕ್ಕಾಚಾರಕ್ಕೆ ಅಣಿಯಾಗಿದ್ದಾರೆ.

ಪ್ರಾದೇಶಿಕಕ್ಕೂ ರಮೇಶ್ ಆಸರೆ: ಇನ್ನು ಪ್ರಾದೇಶಿಕ ಪಕ್ಷವಾಗಿರುವ ಜೆಡಿಎಸ್ ಈಗಾಗಲೇ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿದ್ದು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಕೇಂದ್ರದ ಸಚಿವರಾಗಿದ್ದಾರೆ. ಸ್ಥಳೀಯವಾಗಿ ಜೆಡಿಎಸ್ ಕಳೆದ ಚುನಾವಣೆಯಲ್ಲಿ ಹೇಳಿಕೊಳ್ಳುವ ಸಾಧನೆ ಮಾಡದಿದ್ದರೂ, ಇಲ್ಲೂ ರಾಜ್ಯಾಧ್ಯಕ್ಷರ ಪಟ್ಟಕ್ಕೆ ಕಾದಾಟಗಳಿವೆ. ನಿಖಿಲ್ ಕುಮಾರಸ್ವಾಮಿಯನ್ನು ರಾಜ್ಯ ಘಟಕಕ್ಕೆ ನೇಮಕ ಮಾಡಲಾಗುತ್ತದೆ ಎಂಬ ಮಾತಿದ್ದರೂ ಪಕ್ಷದಲ್ಲಿ ಹಲವರ ವಿರೋಧವಿದೆ. ಇದೇ ವೇಳೆ ಪಕ್ಷವನ್ನು ಮೇಲಕ್ಕೆತ್ತಲು ಸಮರ್ಥ ಸಾರಥಿಯ ಅವಶ್ಯವಿದೆ. ಇದೇ ವೇಳೆ ರಾಜ್ಯ ಆಡಳಿತಾರೂಢ ಕಾಂಗ್ರೆಸ್‌ನಲ್ಲಿ ವಿಪ್ಲವಗಳು ಎದುರಾದರೆ ತಮ್ಮ ಪಕ್ಷದ ಶಾಸಕರನ್ನು ಹಿಡಿತದಲ್ಲಿಟ್ಟುಕೊಳ್ಳಬೇಕೆಂಬ ಇರಾದೆಯೂ ಪಕ್ಷದ ವರಿಷ್ಠರಲ್ಲಿದೆ.

ಇತ್ತ ಜೆಡಿಎಸ್‌ನ ಕೆಲ ಶಾಸಕರನ್ನು ಸಿಎಂ ಸಿದ್ದರಾಮಯ್ಯ, ಮತ್ತೊಂದೆಡೆ ಡಿ.ಕೆ.ಶಿವಕುಮಾರ್ ಅವರು ವೈಯುಕ್ತಿಕವಾಗಿ ಕರೆದು ಮಾತಾಡಿರುವುದು ಜೆಡಿಎಸ್ ವರಿಷ್ಠರ ಅಂಗಳಕ್ಕೆ ತಲುಪಿದೆ. ಹೀಗಾಗಿ ಪಕ್ಷದ ಶಾಸಕರನ್ನು ಉಳಿಸುವ ಕಾರ್ಯತಂತ್ರ ಭಾಗವಾಗಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಖುದ್ದಾಗಿ ರಮೇಶ್ ಜಾರಕಿಹೊಳಿ ಬಳಿ ಸಹಾಯ ಹಸ್ತ ಚಾಚಿರುವುದು ಈಗ ಗುಟ್ಟಾಗಿ ಉಳಿದಿಲ್ಲ. ಹೀಗಾಗಿ ರಾಜ್ಯ ರಾಜಕಾರಣ ಜಾರಕಿಹೊಳಿ ಸಹೋದರರ ಸುತ್ತ ಸುತ್ತುತ್ತಿದೆ.

ಐಸಿಎಆರ್ ಸಂಸ್ಥೆಯಿಂದ ರೈತರ ಅಭಿವೃದ್ಧಿ

ಧಾರವಾಡದ ಕೃಷಿ ವಿವಿ ಅಮೃತ ಮಹೋತ್ಸವದಲ್ಲಿ ಉಪರಾಷ್ಟ್ರಪತಿ ಜಗದೀಪ ಧನಕರ್ ಭಾಗಿ

